# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 301 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 22–06–2024 ಶನಿವಾರ | ಪುಟ: 4 | ಬೆಲೆ : ರೂ.2–00

Volume - 01 Issue - 301 | Title- Code: KARKAN 28269 | Chitradurga | Date: 22-06-2024 Saturday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಭದ್ರಾ ಯೋಜನೆಯ 5,300 ಕೋಟಿ ರೂ.ಅನುದಾನಕ್ಕೆ ಮರು ಕೋರಿಕೆ 2

ನೂತನ ಕಾನೂನುಗಳು ಬದಲಾವಣೆ ಜತೆ ಸುರಕ್ಷಾ ಸಮಾಜ ನಿರ್ಮಾಣಕ್ಕೆ ಸಹಾಯಕ 3

ಜೂ.24 ರಂದು ಅಂಗನವಾಡಿ ಕಾರ್ಯಕರ್ತೆಯರಿಂದ ಬೆಂಗಳೂರು ಚಲೋ 4



ಸುದ್ದಿ, ಜಾಹಿರಾತಿಗೆ 9686622252


### ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ, ಗುಣ ನೋಡಿ ಗೆಳೆತನ ಮಾಡು , ಯಾಕೆಂದರೆ ಬಟ್ಟೆ ಹರಿದು ಹೋಗುವ ತನಕ ಮಾತ್ರ ಇರುತ್ತದೆ, ಗುಣ ಸಾಯುವವರೆಗೂ ಇರುತ್ತದೆ !!

» ಶುಭೋದಯ

## 10ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ

# ಮಾನಸಿಕ ಸದೃಢತೆ, ಒತ್ತಡ ಮುಕ್ತ ಜೀವನಕ್ಕೆ ಯೋಗ ಸಹಕಾರಿ: ಶಾಸಕ ನವೀನ್ ಅಭಿಮತ







» ಚಿತ್ರದುರ್ಗ

ಯೋಗ ದೈಹಿಕವಾಗಿ ಶಕ್ತಿ ಹಾಗೂ ಚೈತನ್ಯ ತುಂಬುವದರ ಜೊತೆಗೆ ಮಾನಸಿಕವಾಗಿ ಸಹ ಸದೃಢರನ್ನಾಗಿಸುತ್ತದೆ. ಇಂದಿನ ನಿತ್ಯದ ಬದುಕಿನಲ್ಲಿ ಯುವ ಜನರಿಗೆ ಮಾನಸಿಕ ಶಕ್ತಿ ಅವಶ್ಯಕವಾಗಿದೆ. ಜೀವನದಲ್ಲಿ ಅನೇಕ ಸವಾಲುಗಳನ್ನು ಎದುರಿಸಲು ಮಾನಸಿಕವಾಗಿ ಸದೃಢರಾಗಿರಲು ಹಾಗೂ ಒತ್ತಡ ಮುಕ್ತ ಜೀವನಕ್ಕೆ ಯೋಗ ಸಹಕಾರಿಯಾಗಿದೆ ಎಂದು ವಿಧಾನ ಪರಿಷತ್ ಶಾಸಕ ಕೆ.ಎಸ್.ನವೀನ್ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಆಯುಷ್ ಇಲಾಖೆ ಹಾಗೂ ವಿವಿಧ ಯೋಗ ಸಂಸ್ಥೆಗಳ ಸಹಯೋಗದಲ್ಲಿ ನಗರದ ಹಳೇ ಮಾಧ್ಯಮಿಕ ಶಾಲಾ ಆವರಣದಲ್ಲಿ ಆಯೋಜಿಸಲಾದ 10ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ ವೇದಿಕೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಯುವಜನರು ಒತ್ತಡದಿಂದ ಹೃದಯಾಘಾತಕ್ಕೆ ಒಳಗಾಗುವುದು. ಜೀವನದ ಕಠಿಣ ಸಮಯ ಎದುರಿಸಲಾಗದೆ ಆತ್ಮಹತ್ಯೆ ಅಂತಹ ಕೃತ್ಯಗಳಿಗೆ ಮುಂದಾಗುವುದನ್ನು ದಿನ ನಿತ್ಯ ಕಾಣುತ್ತಿದ್ದೇವೆ. ಬಹಳಷ್ಟು ಯುವ ಜನರು ದುಶ್ಚಟಗಳಿಗೆ ಬಲಿಯಾಗುತ್ತಿದ್ದಾರೆ. ಯೋಗದಿಂದ ಈ ಇವೆಲ್ಲವೂಗಳಿಗೂ ಪರಿಹಾರ ದೊರಕಲಿದೆ ಎಂದರು.

ಇದರ ಬದಲಾಗಿ ಜೀವನದಲ್ಲಿ ಸಕಾರಾತ್ಮಕ ಚಿಂತನೆ ಹಾಗೂ ಸದೃಢ ಮನೋಭಾವ ಹೊಂದಲು ಯೋಗವನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳುವುದು ಅತ್ಯಗತ್ಯವಾಗಿದೆ. ಯುವಜನತೆಯಲ್ಲಿ ಕ್ರೋಧ ಮತ್ಸರ, ದ್ವೇಷ, ಸಮಾಜ ಘಾತುಕ ಮನೋಭಾವ ಮೂಡದಂತೆ ಯೋಗಾಭ್ಯಾಸ ತಡೆಯುತ್ತದೆ. ಇದರಿಂದ ಯುವ ಜನತೆಗೆ ಲಾಭವಾಗುತ್ತದೆ ಎಂದು ಕೆ.ಎಸ್.ನವೀನ್ ಅಭಿಪ್ರಾಯಪಟ್ಟರು.

ಜಗತ್ತಿಗೆ ಯೋಗ ಪರಿಚಯಿಸಿದ ಕೀರ್ತಿ ಭಾರತದ್ದು, ವಿಶ್ವ ಸಂಸ್ಥೆ 2014 ರಲ್ಲಿ ಸರ್ವಾನುಮತದಿಂದ ಜೂನ್21ನ್ನು ಯೋಗ ದಿನಾಚರಣೆಯಾಗಿ ಘೋಷಣೆ ಮಾಡಿದೆ. ಇಂದು ವಿಶ್ವದ 187 ದೇಶಗಳಲ್ಲಿ ಯೋಗ ದಿನಾಚರಣೆ ಆಚರಿಸಲಾಗುತ್ತಿದೆ. ಪ್ರಧಾನ ಮಂತ್ರಿ ನರೇಂದ್ರ ಮೋದಿ ಯೋಗವನ್ನು ವಿಶ್ವದಾದ್ಯಂತ ಪಸರಿಸಲು ಪ್ರಯತ್ನ ಮಾಡುತ್ತಿದ್ದಾರೆ. ಚಿತ್ರದುರ್ಗ ಜಿಲ್ಲೆಯಲ್ಲಿ ಯಾವುದೇ ಎಲೆಕ್ಟ್ರಾನಿಕ್ ಮಾಧ್ಯಮಗಳು ಇಲ್ಲದ ಸಂದರ್ಭದಲ್ಲಿ ಮಲ್ಲಾಡಿಹಳ್ಳಿಯ ರಾಘವೇಂದ್ರ ಸ್ವಾಮಿಗಳು ಯೋಗವನ್ನು ಗ್ರಾಮ ಗ್ರಾಮಗಳಿಗೆ ಕೊಂಡೊಯ್ದರು. ರಾಜ್ಯದಲ್ಲಿ ಯೋಗವನ್ನು ಹೆಚ್ಚು ಪ್ರಚಾರ ಮಾಡಿದವರು ನಟ ಸಾರ್ವಭೌಮ ಡಾ.ರಾಜಕುಮಾರ್, ಅವರ ಕಾಮನಬಿಲ್ಲು ಎಂಬ ಚಲನಚಿತ್ರದಲ್ಲಿ ಸ್ವತಃ ಯೋಗ ಮಾಡುವುದರ ಮೂಲಕ ಎಲ್ಲರಿಗೂ ಪ್ರೇರಣೆಯಾದರು. ಇದೇ ಮಾದರಿಯಲ್ಲಿ ಇಂದು ಯೋಗಭ್ಯಾಸದಲ್ಲಿ ಪಾಲ್ಗೊಂಡ ಎಲ್ಲರೂ ಯೋಗ ರಾಯಭಾರಿಗಳಾಗಿ ಯೋಗವನ್ನು ಎಲ್ಲಡೆ ಪಸರಿಸಬೇಕು. ಮುಂದಿನ ಅಂತರಾಷ್ಟ್ರೀಯ ಯೋಗ ದಿನಾಚರಣೆ ವೇಳೆಗೆ ಚಿತ್ರದುರ್ಗ ಜಿಲ್ಲೆಯಲ್ಲಿ ರಾಜ್ಯದಲ್ಲೇ ಅತಿ ಹೆಚ್ಚು ಜನರು ಸಾಮೂಹಿಕ ಯೋಗಾಭ್ಯಾಸದಲ್ಲಿ ತೊಡಗುವಂತಾಗಬೇಕು. ಆಯುಷ್ ಇಲಾಖೆ ಈ ಕಾರ್ಯ ಕೈಗೊಳ್ಳುವ ಮೂಲಕ ಇತರೆ ಜಿಲ್ಲೆಗಳಿಗೆ ಮಾದರಿಯಾಗಲಿ ಎಂದು ಕೆ.ಎಸ್.ನವೀನ್ ಹೇಳಿದರು.







ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ತಾಜ್‌ಪೀರ್ ಮಾತನಾಡಿ, ಯೋಗವನ್ನು ಯಾವುದೇ ಒಂದು ಧರ್ಮಕ್ಕೆ ಸೀಮಿತಗೊಳಿಸಿ ನೋಡಬಾರದು. ಇಂದು ವಿಶ್ವದ ಎಲ್ಲಾ ರಾಷ್ಟ್ರಗಳು ಯೋಗದ ಮಹತ್ವ ಅರಿತುಕೊಂಡಿವೆ. ಯುವ ಜನತೆ ಯೋಗದ ಬಗ್ಗೆ ಒಲವು ಬೆಳಸಿಕೊಳ್ಳಬೇಕು. ನಮ್ಮ ಆರೋಗ್ಯ ನಮ್ಮ ಕೈಕಾಲುಗಳಲ್ಲಿ ಅಡಗಿದೆ. ಯುವಕರು ದೇಹಕ್ಕೆ ಹಾನಿಕರವಾದ ದುಶ್ಚಟಗಳಿಂದ ದೂರ ಇರಬೇಕು ಎಂದರು.ನಾಡಿನೆಲ್ಲೆಡೆ ಯೋಗವನ್ನು ಪ್ರಚಾರ ಮಾಡುವಲ್ಲಿ ಮಲ್ಲಾಡಿಹಳ್ಳಿಯ ರಾಘವೇಂದ್ರ ಸ್ವಾಮಿಗಳ ಕೊಡುಗೆ ಮಹತ್ವದಾಗಿದೆ. ಶತಾಯುಷಿಗಳಾಗಿದ್ದ ಅವರು ತಮ್ಮ ಇಡೀ ಜೀವನವನ್ನು ಯೋಗಕ್ಕೆ ಮುಡಿಪಾಗಿಟ್ಟಿದ್ದರು. ಯೋಗಾಸಕ್ತರು ಮಲ್ಲಾಡಿಹಳ್ಳಿ ಆಶ್ರಮಕ್ಕೆ ಭೇಟಿ ನೀಡಿ ಅವರ ಯೋಗ ಸಾಧನೆಗಳನ್ನು ಅರಿಯಬೇಕು ಎಂದು ತಾಜ್‌ಪೀರ್ ಹೇಳಿದರು.

ಅಪರಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಮಾತನಾಡಿ, ಯೋಗ ದೇಶದ ಸಾಂಸ್ಕೃತಿಕತೆಯ ಪ್ರತೀಕವಾಗಿದೆ. ಯೋಗ ಅಂತರಾಷ್ಟ್ರೀಯ ಮನ್ನಣೆಗಳಿಸಿದೆ. ನಿತ್ಯ ಜೀವನದಲ್ಲಿ ಯೋಗವನ್ನು ಅಳವಡಿಸಿಕೊಳ್ಳುವ ಮೂಲಕ ಉತ್ತಮ ಆರೋಗ್ಯ ಹೊಂದಲು ಕರೆ ನೀಡಿದರು.

ಪುಟ 2

## ಫಾಸ್ಟ್ ನ್ಯೂಸ್

### ಗ್ರಂಥಾಲಯ ವಿಜ್ಞಾನ ತರಬೇತಿಗೆ ಅರ್ಜಿ ಆಹ್ವಾನ

» ಚಿತ್ರದುರ್ಗ

ಸಾರ್ವಜನಿಕ ಗ್ರಂಥಾಲಯ ಇಲಾಖೆ ಅಡಿಯಲ್ಲಿ ರಾಜ್ಯದ ನಾಲ್ಕು ಕಂದಾಯ ವಿಭಾಗಗಳಾದ ಬೆಂಗಳೂರು, ಮೈಸೂರು ವಿಭಾಗದ ಮಂಗಳೂರು, ಬೆಳಗಾವಿ ವಿಭಾಗದ ಧಾರವಾಡ ಮತ್ತು ಕಲಬುರಗಿ ವಿಭಾಗಗಳಲ್ಲಿ ಆರು ತಿಂಗಳ ಅವಧಿಯ ಗ್ರಂಥಾಲಯ ವಿಜ್ಞಾನ ತರಬೇತಿ ಶಾಲೆಗಳನ್ನು ನಡೆಸಲಾಗುತ್ತಿದೆ. ಅದಕ್ಕೆ ಸಂಬಂಧಪಟ್ಟಂತೆ ಪಿಯುಸಿ ಪರೀಕ್ಷೆಯಲ್ಲಿ ಕನಿಷ್ಠ 40%, ಎಸ್.ಸಿ, ಎಸ್.ಟಿ ಗೆ 35% ರಷ್ಟು ಅಂಕ ಪಡೆದ ಅಭ್ಯರ್ಥಿಗಳು ಈ ತರಬೇತಿಗೆ ಅರ್ಹರಾಗಿರುತ್ತಾರೆ. ಅರ್ಜಿ ಸಲ್ಲಿಸಲು ಜುಲೈ 19 ಕೊನೆಯ ದಿನವಾಗಿದೆ. ಹಾಲಿ ಕಾರ್ಯ ನಿರ್ವಹಿಸುತ್ತಿರುವ ಇಲಾಖೆಯ 'ಡಿ' ದರ್ಜೆಯ ಗ್ರಂಥಾಲಯ ಸಹವರ್ತಿಗಳು ಸಂಬಂಧಪಟ್ಟ ಉಪನಿರ್ದೇಶಕರು, ಮುಖ್ಯ ಗ್ರಂಥಾಲಯಾಧಿಕಾರಿಗಳ ಮುಖಾಂತರ ಹಾಗೂ ಗ್ರಾಮ ಪಂಚಾಯತಿ ಗ್ರಂಥಾಲಯ ಮೇಲ್ವಿಚಾರಕರು ಸಂಬಂಧಪಟ್ಟ ಪಂಚಾಯ್ತಿ ಅಭಿವೃದ್ಧಿ ಅಧಿಕಾರಿಗಳ ಮುಖಾಂತರ ಮತ್ತು ಇತರ ಸಂಸ್ಥೆಯಿಂದ ಬರುವ ಅಭ್ಯರ್ಥಿಗಳು ತಮ್ಮ ಸಂಸ್ಥೆಯ ಮುಖ್ಯಸ್ಥರ ಮುಖಾಂತರ ಅರ್ಜಿಯನ್ನು ಸಲ್ಲಿಸಬಹುದು. ಅರ್ಜಿಯ ಜೊತೆಗೆ ಪಿಯುಸಿ ಅಂಕಪಟ್ಟಿ, ಜಾತಿ ಪ್ರಮಾಣ ಪತ್ರ, ಸೇವಗೆ ಸೇರಿದ ದಿನಾಂಕ, ವೇತನ ಪ್ರಮಾಣ ಪತ್ರ, ನಡವಳಿಕೆಯ ಪ್ರಮಾಣ ಪತ್ರಗಳ ನಕಲು ಪ್ರತಿಗಳನ್ನು ಲಗತ್ತಿಸಬೇಕು. ಸಾಮಾನ್ಯ ಅಭ್ಯರ್ಥಿಗಳು ಪಿಯುಸಿ ಅಂಕಪಟ್ಟಿ, ಜಾತಿ ಪ್ರಮಾಣ ಪತ್ರ, ಮೀಸಲಾತಿ ಹೊಂದಿದ್ದಲ್ಲಿ ಕನ್ನಡ ಮಾಧ್ಯಮ, ಗ್ರಾಮೀಣ ಮಾಧ್ಯಮ, ಮಾಜಿ ಸೈನಿಕ, 371ಎ ಪ್ರಮಾಣ ಪತ್ರಗಳ ದೃಢೀಕೃತ ನಕಲು ಪ್ರತಿಗಳನ್ನು ಸಲ್ಲಿಸಬೇಕು.ಹೆಚ್ಚಿನ ಮಾಹಿತಿಗಾಗಿ ಬೆಂಗಳೂರು ರಾಜ್ಯ ಕೇಂದ್ರ ಗ್ರಂಥಾಲಯ, ಕಬ್ಬನ್ ಉದ್ಯಾನವನ ಉಪನಿರ್ದೇಶಕರ ಕಚೇರಿ ದೂರವಾಣಿ ಸಂಖ್ಯೆ 080–22212128, ಧಾರವಾಡ ನಗರ ಕೇಂದ್ರ ಗ್ರಂಥಾಲಯ, ಡಿ.ಸಿ.ಕಚೇರಿ ಆವರಣ ಉಪನಿರ್ದೇಶಕರ ಕಚೇರಿ ದೂರವಾಣಿ ಸಂಖ್ಯೆ 0836–2442465 ಗೆ ಸಂಪರ್ಕಿಸಬಹುದು.

### ಜಿ.ಪಂ ಕೆಡಿಪಿ ಸಭೆ: ಜೂ.26ಕ್ಕೆ ಮುಂದೂಡಿಕೆ

» ಚಿತ್ರದುರ್ಗ

ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಅವರ ಅಧ್ಯಕ್ಷತೆಯಲ್ಲಿ ಜೂನ್ 24ರಂದು ಕರೆಯಲಾಗಿದ್ದ ಜಿಲ್ಲಾ ಪಂಚಾಯಿತಿ ಕೆ.ಡಿ.ಪಿ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯನ್ನು ಜೂನ್ 26ರಂದು ಬೆಳಿಗ್ಗೆ 11 ಗಂಟೆಗೆ ಮುಂದೂಡಲಾಗಿದೆ. ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜರುಗುವ ಸಭೆಗೆ 2023–24ನೇ ಸಾಲಿನ ಮಾರ್ಚ್ ಅಂತ್ಯದವರೆಗಿನ ಪ್ರಗತಿ ವರದಿಯೊಂದಿಗೆ ಜಿಲ್ಲಾಮಟ್ಟದ ಅಧಿಕಾರಿಗಳು ಹಾಜರಾಗಬೇಕು ಎಂದು ಜಿಪಂ ಸಿಇಓ ಅಧಿಕಾರಿ ಎಸ್.ಜೆ.ಸೋಮಶೇಖರ್ ತಿಳಿಸಿದ್ದಾರೆ.

### ಮಹಿಳೆ ಪತ್ತೆಗೆ ಮನವಿ

» ಚಿತ್ರದುರ್ಗ

ಹೊಳಲ್ಕೆರೆ ತಾಲ್ಲೂಕಿನ ಹೆಚ್.ಡಿ.ಪುರ ಗ್ರಾಮದ ನಿವಾಸಿ ಕಾಂತಮಣಿ ತಂದೆ ಪರಶುರಾಮ(ಸು.34ವರ್ಷ) ಕಾಣೆಯಾದ ಕುರಿತು 2024 ರ ಮೇ 29 ರಂದು ಚಿತ್ರಹಳ್ಳಿ ಗೇಟ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.ಕಾಣೆಯಾದ ಕಾಂತಮಣಿ ಸು.34 ವರ್ಷ, 5 ಅಡಿ ಎತ್ತರ ಕೋಲು ಮುಖ, ಬಿಳಿ ಬಣ್ಣ ಸಾಧಾರಣ ಮೈಕಟ್ಟು, ಎಡಗೈಯಲ್ಲಿ ಖಪ ಎನ್ನುವ ಹಚ್ಚೆ ಗುರುತು ಇದ್ದು, ಕನ್ನಡ ಭಾಷೆ ಮಾತನಾಡುವರು. ಮನೆಯಿಂದ ಹೋಗುವಾಗ ಚೂಡಿದಾರ ಧರಿಸಿರುತ್ತಾಳೆ. ಇವರ ಗುರುತು ಪತ್ತೆಯಾದರೆ ಹೊಳಲ್ಕೆರೆ ಠಾಣಾಧಿಕಾರಿಗಳ ಕಚೇರಿ ಸಂಪರ್ಕಿಸುವಂತೆ ಪ್ರಕಟಣೆ ತಿಳಿಸಿದೆ.

## ಪ್ರಮುಖ ಸುದ್ದಿ

# ಕ್ಷೇತ್ರದ ಸರ್ವತೋಮುಖ ಅಭಿವೃದ್ಧಿಗೆ ಕೈಜೋಡಿಸಿ: ಶಾಸಕ

» ಚಳ್ಳಕೆರೆ

ಲೋಕಸಭಾ ಚುನಾವಣೆಯ ಪ್ರಕ್ರಿಯೆಯಿಂದ ಹೊರಬಂದು ಅಧಿಕಾರಿವರ್ಗ ತಮ್ಮ ವ್ಯಾಪ್ತಿಯಲ್ಲಿ ಸಾರ್ವಜನಿಕರಿಗೆ ಉತ್ತಮ ಸೇವೆಯ ಜೊತೆಗೆ ಸರ್ಕಾರಿ ಸೌಲಭ್ಯಗಳ ಬಗ್ಗೆ ಜಾಗೃತಿ ಮೂಡಿಸಬೇಕಿದೆ. ಜನರ ಸಮಸ್ಯೆ ನಿವಾರಣೆಯಾದಲ್ಲಿ ಮಾತ್ರ ಒಳ್ಳೆ ಆಡಳಿತ ನೀಡಿದ ಹೆಮ್ಮೆ ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ಸಲ್ಲುತ್ತದೆ. ಈ ನಿಟ್ಟಿನಲ್ಲಿ ಪ್ರತಿಯೊಬ್ಬ ಅಧಿಕಾರಿ ತನ್ನ ಜವಾಬ್ದಾರಿಯನ್ನು ನಿರ್ವಹಿಸುವಲ್ಲಿ ಹಿಂದೆ ಬೀಳಬಾರದು ಜನರ ಸೇವಕಾರಾಗಿ ಕಾರ್ಯನಿರ್ವಹಿಸಿ ಎಂದು ಕ್ಷೇತ್ರದ ಶಾಸಕ, ರಾಜ್ಯಸಣ್ಣಕೈಗಾರಿಕೆ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.

ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ತ್ರೈಮಾಸಿಕ ಕೆಡಿಪಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಪ್ರಾರಂಭದಲ್ಲಿ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಟಿ.ಶಶಿಧರ ಔಪಚಾರಿಕವಾಗಿ ಸ್ವಾಗತಿಸಿದರು. ತಾಲ್ಲೂಕು ಪಂಚಾಯಿತಿ ಆಡಳಿತಾಧಿಕಾರಿ ಕೃಷಿ ಇಲಾಖೆ ಜಿಲ್ಲಾ ಜಂಟಿ ನಿರ್ದೇಶಕ ಮಂಜುನಾಥ, ಡಿವೈಎಸ್ಪಿ ರಾಜಣ್ಣ, ತಹಶೀಲ್ದಾರ್ ರೇಹಾನ್‌ಪಾಷ, ಚಿತ್ರದುರ್ಗ ತಹಶೀಲ್ದಾರ್ ನಾಗವೇಣಿ, ಪೌರಾಯುಕ್ತ ಕೆ.ಜೀವನ್‌ಕಟ್ಟಿಮನಿ, ಕೆಎಸ್‌ಆರ್‌ಟಿಸಿ ಡಿಸಿ ಶ್ರೀನಿವಾಸ್ ಮುಂತಾದವರು ಸಭೆಯಲ್ಲಿ ಭಾಗವಹಿಸಿದ್ದರು.



ಪ್ರಾರಂಭದಲ್ಲಿ ಕೃಷಿ ಇಲಾಖೆ ಮಾಹಿತಿ ನೀಡಿದ ಸಹಾಯಕ ಕೃಷಿ ನಿರ್ದೇಶಕ ಜೆ.ಅಶೋಕ್, ತಾಲ್ಲೂಕಿನಾದ್ಯಂತ 138 ಎಂ.ಎಂ. ಮಳೆಯಾಗಿದ್ದು ವಾಡಿಕೆ ಮಳೆ 205ಕ್ಕಿಂತ ಹೆಚ್ಚಾಗಿದೆ. ಕಸಬಾ ಹೋಬಳಿಯೂ ಸೇರಿದಂತೆ ಎಲ್ಲೆಡೆ ಕೃಷಿ ಚಟುವಟಿಕೆ ಆರಂಭವಾಗಿದೆ. ಈ ತಾಲ್ಲೂಕಿನಲ್ಲಿ ಶೇ.90ಭಾಗ ಶೇಂಗಾ ಬೆಳೆಯಲಾಗುತ್ತದೆ, ತಾಲ್ಲೂಕಿನಲ್ಲಿ ಕಳೆದ ಬಾರಿ 36 ಸಾವಿರ ರೈತರು ಬೆಳೆವಿಮೆ ಮಾಡಿಸಿದ್ದು ಇದು ಜಿಲ್ಲೆಯಲ್ಲೇ ಅಧಿಕವೆಂದರು.

ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ಮಾಹಿತಿ ನೀಡಿ, 100ಕ್ಕೂ ಹೆಚ್ಚು ಪ್ರೌಢಶಾಲೆ, 380 ಪ್ರಾಥಮಿಕ ಶಾಲೆಗಳು ಕಾರ್ಯನಿರ್ವಹಿಸುತ್ತಿವೆ, 45 ಅತಿಥಿ ಶಿಕ್ಷಕರನ್ನು ನೇಮಿಸಿಕೊಂಡು ಕಾರ್ಯ ಮುಂದುವರೆಸಿದೆ, ಎಸ್‌ಎಸ್‌ಎಲ್‌ಸಿ ಫಲಿತಾಂಶ ನಿರೀಕ್ಷೆ ಮಟ್ಟದಲ್ಲಿ ದಾಖಲಾಗಲಿಲ್ಲ ಈ ಬಾರಿ ಹೆಚ್ಚು ಗಮನಹರಿಸುವ ಉದ್ದೇಶದಿಂದ ತಾಲ್ಲೂಕು ಮಟ್ಟದ ಪ್ರೌಢಶಾಲಾ ಮುಖ್ಯ ಶಿಕ್ಷಕರ ಸಭೆ ಆಯೋಜಿಸಲಾಗಿದೆ ಎಂದರು. ಸಮಾಜ ಕಲ್ಯಾಣಾಧಿಕಾರಿ ದೇವ್ಲಾನಾಯ್ಕ, ಎಸ್ಟಿ ಕಲ್ಯಾಣಾಧಿಕಾರಿ, ಬಿಸಿಎಂ ಅಧಿಕಾರಿ ಹಾಸ್ಟಲ್‌ಗಳ ಸ್ಥಿತಿಗತಿಯ ಬಗ್ಗೆ ಮಾಹಿತಿ ನೀಡಿದರು.ತೋಟಗಾರಿಕೆ, ಪಶುವೈದ್ಯ, ರೇಷ್ಮೆ ಅಧಿಕಾರಿಗಳಿಗೆ ಸೂಚಿಸಿದ ಶಾಸಕರು ತಮ್ಮ ವ್ಯಾಪ್ತಿಯಲ್ಲಿ ರೈತರ ಸಮೂಹಕ್ಕೆ ಉಪಯುಕ್ತ ಯೋಜನೆಗಳನ್ನು ತಲುಪಿಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸಿ, ಎನ್‌ಆರ್‌ಇಜಿ ಯೋಜನೆಯಡಿ ಅಭಿವೃದ್ಧಿ ಕಾರ್ಯಕ್ರಮಗಳನ್ನು ಕೈಗೊಳ್ಳಬೇಕು ಎಂದರು.

ಪುಟ 2

## ಫಾಸ್ಟ್ ನ್ಯೂಸ್

### ಮಾನಸಿಕ ಸದೃಢತೆ, ಒತ್ತಡ ಮುಕ್ತ ಜೀವನಕ್ಕೆ ಯೋಗ ಸಹಕಾರಿ: ನವೀನ್ ಅಭಿಮತ

» ಮೊದಲ ಪುಟದಿಂದ

ಸರ್ಕಾರದ ಗ್ಯಾರಂಟಿ ಯೋಜನೆಗಳ ಜಿಲ್ಲಾ ಮಟ್ಟದ ಅನುಷ್ಠಾನ ಸಮಿತಿ ಅಧ್ಯಕ್ಷ ಶಿವಣ್ಣ ಮಾತನಾಡಿ, ಪ್ರತಿ ಮನೆ ಮನೆಗಳಲ್ಲಿ ಯೋಗಭ್ಯಾಸ ಮಾಡಬೇಕು. ಯೋಗವು ಉತ್ತಮ ಮಾನವೀಯ ಮೌಲ್ಯಗಳನ್ನು ಅಳವಡಿಸಿಕೊಳ್ಳಲು ಸಹಾಯಕವಾಗಿದೆ ಎಂದರು. ವೇದಿಕೆಯಲ್ಲಿ ಚಿತ್ರದುರ್ಗ ಅಮೃತ ಆಯುರ್ವೇದ ಕಾಲೇಜಿನ ವೈದ್ಯ ವಿದ್ಯಾರ್ಥಿಗಳು ವಿಶೇಷ ಯೋಗ ನೃತ್ಯ ಪ್ರದರ್ಶಿಸಿದರು. ನಗರದ ನಿಸರ್ಗ ಯೋಗ ಕೇಂದ್ರದ 73 ವರ್ಷದ ಯೋಗಗುರು ಶಿವಲಿಂಗಪ್ಪ ವೇದಿಕೆ ಮೇಲೆ ಯೋಗಾಭ್ಯಾಸ ನೆಡಿಸಿ ಗಮನ ಸೆಳೆದರು. ಯೋಗ ಶಿಕ್ಷಕ ಭರಮಸಾಗರದ ತಿಪ್ಪೇಸ್ವಾಮಿ ಸಾಮೂಹಿಕ ಯೋಗಭ್ಯಾಸ ಆಸನಗಳನ್ನು ಬೋಧಿಸುವ ಮೂಲಕ ಯೋಗದ ಮಹತ್ವ ತಿಳಿಸಿದರು. ಈ ಬಾರಿಯ ಯೋಗ ದಿನಾಚರಣೆಯ ಘೋಷವಾಕ್ಯ ಸ್ವಂತ ಹಾಗೂ ಸಮಾಜಕ್ಕಾಗಿ ಯೋಗ ಎನ್ನುವುದನ್ನು ಸಾರುವ ನಿಟ್ಟಿನಲ್ಲಿ 2000 ಕ್ಕೂ ಹೆಚ್ಚು ಯೋಗಾಸಕ್ತರು ಸುಮಾರು 45 ನಿಮಿಷಗಳ ಕಾಲ ಸಾಮೂಹಿಕ ಯೋಗಾಭ್ಯಾಸ ಮಾಡಿದರು. ಆಯುಷ್ ವೈದ್ಯಾಧಿಕಾರಿ ಡಾ.ಶಿವಕುಮಾರ್ ಕಾರ್ಯಕ್ರಮ ನಿರೂಪಿಸಿದರು. ವೈದ್ಯಾಧಿಕಾರಿ ಗಿರೀಶ್ ಸ್ವಾಗತಿಸಿದರು. ವೈದ್ಯಾಧಿಕಾರಿ ಪ್ರಶಾಂತ್ ವಂದಿಸಿದರು. ಉಪವಿಭಾಗಾಧಿಕಾರಿ ಎಂ.ಕಾರ್ತಿಕ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳಾದ ಎಸ್.ಜೆ.ಕುಮಾರಸ್ವಾಮಿ, ಲಕ್ಷ್ಮೀನಾರಾಯಣ, ನಗರ ಸಭೆ ಆಯುಕ್ತೆ ಎಂ.ರೇಣುಕಾ, ಜಿಲ್ಲಾ ಆಯುಷ್ ಅಧಿಕಾರಿ ಡಾ.ಚಂದ್ರಕಾಂತ್ ನಾಗಸಮುದ್ರ ಸೇರಿದಂತೆ ವಿವಿಧ ಇಲಾಕೆ ಅಧಿಕಾರಿಗಳು, ಜಿಲ್ಲೆಯ ಆಯುರ್ವೇದ ಕಾಲೇಜು ವಿದ್ಯಾರ್ಥಿಗಳು, ವಿವಿಧ ಯೋಗ ಸಂಸ್ಥೆಗಳ ಮುಖ್ಯಸ್ಥರು, ಸದಸ್ಯರು ಪಾಲ್ಗೊಂಡಿದ್ದರು.

### ಕ್ಷೇತ್ರದ ಸರ್ವತೋಮುಖ ಅಭಿವೃದ್ಧಿಗೆ ಕೈಜೋಡಿಸಿ: ಶಾಸಕ ಟಿ.ರಘುಮೂರ್ತಿ



» ಮೊದಲ ಪುಟದಿಂದ

ಜಿಲ್ಲಾ ಪಂಚಾಯಿತಿ ಇಂಜಿನಿಯರಿಂಗ್ ವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರ ಎನ್.ಕಾವ್ಯ ಮಾಹಿತಿ ನೀಡಿ, ಕ್ಷೇತ್ರದ ಒಟ್ಟು 52 ರಸ್ತೆಗಳನ್ನು ಆಯ್ಕೆ ಮಾಡಿ ಸುಮಾರು 11.90 ಲಕ್ಷ ವೆಚ್ಚದಲ್ಲಿ ರಸ್ತೆಯ ಎರಡೂ ಬಾಗದ ಜಾಲಿಗಿಡಗಳನ್ನು ತೆರವುಗೊಳಿಸಲಾಗಿದೆ ಎಂದರು.ಕೆಎಸ್ಆರ್‌ಟಿಸಿ ಡಿಸಿ ಶ್ರೀನಿವಾಸ್ ಮಾಹಿತಿ ನೀಡಿ, ಚಳ್ಳಕೆರೆ ಡಿಪೋಗೆ 7 ಬಸ್‌ಗಳು ನೀಡಿದ್ದು ಗ್ರಾಮಾಂತರ ಪ್ರದೇಶಕ್ಕೆ ಹೆಚ್ಚಿನ ಸಾರಿಗೆ ಸೌಲಭ್ಯ ನೀಡಲಾಗುವುದು ಎಂದರು. ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಕಾಶಿ ಮಾಹಿತಿ ನೀಡಿ, ಯಾವುದೇ ಸಾಂಕ್ರಾಮಿಕ ರೋಗ ಹರಡದಂತೆ ಎಚ್ಚರಿಕೆ ವಹಿಸಲಾಗಿದೆ ಎಂದರು. ಭದ್ರಾ ಮೇಲ್ದಂಡೆ ಯೋಜನೆ ಇಂಜಿನಿಯರ್ ಮಾಹಿತಿ ನೀಡಿ ಪೈಪ್ ಲೈನ್ ಕಾಮಗಾರಿ ಪ್ರಗತಿಯಲ್ಲಿದೆ ಎಂದರು. ತಾಲ್ಲೂಕು ಮಟ್ಟದ ಸರ್ಕಾರಿ ಅಧಿಕಾರಿಗಳು ಕಾನೂನು ಬದ್ಧವಾಗಿಯೇ ಕೆಲಸ ನಿರ್ವಹಿಸಿ, ನೀವು ಮಾಡಿದ ಕೆಲಸದ ಬಗ್ಗೆ ನಿಮಗೆ ತೃಪ್ತಿ ಇದ್ದರೆ ಅದು ನಿಮಗೆ ಒಳ್ಳೆಯ ಫಲ ನೀಡುತ್ತದೆ. ಯಾವುದೇ ರಾಜಕೀಯ ವ್ಯಕ್ತಿಗಳ ಮಾತು ಕೇಳದೆ ಕಾನೂನಿನಡಿಯಲ್ಲಿ ಉತ್ತಮವಾಗಿ ಕಾರ್ಯನಿರ್ವಹಿಸಿ, ಯಾವುದೇ ಪ್ರಚೋದನೆ, ಪ್ರಲೋಬನೆಗೆ ಒಳಗಾಗದಂತೆ ಕಾರ್ಯನಿರ್ವಹಿಸಬೇಕು ಎಂದರು.

### ಜೂನ್ 24ರಂದು ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಅಧ್ಯಕ್ಷರ ಜಿಲ್ಲಾ ಪ್ರವಾಸ


» ಚಿತ್ರದುರ್ಗ

ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಜಿ.ಪದ್ಮಾವತಿ ಅವರು ಇದೇ ಜೂನ್ 24ರಂದು ಚಿತ್ರದುರ್ಗ ಜಿಲ್ಲಾ ಪ್ರವಾಸ ಕಾರ್ಯಕ್ರಮ ಹಮ್ಮಿಕೊಂಡಿದ್ದಾರೆ. ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಜಿ.ಪದ್ಮಾವತಿ ಅವರು ಜೂನ್ 24ರಂದು ಬೆಳಿಗ್ಗೆ 7ಕ್ಕೆ ಬೆಂಗಳೂರಿನಿಂದ ಹೊರಟು, ಬೆಳಿಗ್ಗೆ 10ಕ್ಕೆ ಚಿತ್ರದುರ್ಗಕ್ಕೆ ಆಗಮಿಸುವರು. ಬೆಳಿಗ್ಗೆ 10.30ಕ್ಕೆ ಚಿತ್ರದುರ್ಗ ತಾಲ್ಲೂಕಿನ ಭರಮಸಾಗರದ ಕೊಳಹಾಳ್‌ನ ಮಡಿಲು ಸ್ವಾವಲಂಭಿ ಸಂಸ್ಥೆಯವರ "ಕುರಿ ಸಾಕಾಣಿಕೆ ಕೇಂದ್ರ" ಘಟಕ ಉದ್ಘಾಟನಾ ಕಾರ್ಯಕ್ರಮ ನೆರವೇರಿಸುವರು. ಬೆಳಿಗ್ಗೆ 11.30ಕ್ಕೆ ನಿಗಮದ ಅಧಿಕಾರಿಗಳು ಮತ್ತು ಮಹಿಳೆಯರೊಂದಿಗೆ ಸಭೆ ನಡೆಸುವರು. ಮಧ್ಯಾಹ್ನ 2.30ಕ್ಕೆ ಜಿಲ್ಲೆಯ ವಿವಿಧ ಘಟಕಗಳ ವೀಕ್ಷಣೆ ಮಾಡಿ ನಂತರ ಸಂಜೆ 4.30ಕ್ಕೆ ಕೇಂದ್ರಸ್ಥಾನ ಬೆಂಗಳೂರಿಗೆ ಪ್ರಯಾಣ ಬೆಳೆಸುವರು ಎಂದು ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಅಧ್ಯಕ್ಷರ ಆಪ್ತ ಕಾರ್ಯದರ್ಶಿ ತಿಳಿಸಿದ್ದಾರೆ.

#### ಭದ್ರಾ ಮೇಲ್ದಂಡೆ ನೂತನ ಮುಖ್ಯ ಇಂಜಿನಿಯರ್ ಎಫ್.ಹೆಚ್.ಲಮಾಣಿ ಮಾಹಿತಿ

# 5,300 ಕೋಟಿ ರೂ.ಅನುದಾನಕ್ಕೆ ಮರು ಕೋರಿಕೆ

» ಚಿತ್ರದುರ್ಗ



ಭದ್ರಾ ಮೇಲ್ದಂಡೆ ಯೋಜನೆಗೆ ಬಜೆಟ್ ಘೋಷಿತ 5300 ಕೋಟಿ ರು ಅನುದಾನ ಬಿಡುಗಡೆಗೆ ಕೇಂದ್ರ ಸರ್ಕಾರಕ್ಕೆ ಮರು ಕೋರಿಕೆ ಪತ್ರ ಬರೆದಿರುವುದಾಗಿ ಭದ್ರಾ ಮೇಲ್ದಂಡೆ ಯೋಜನೆ ಮುಖ್ಯ ಇಂಜಿನಿಯರ್ ಫಕೀರಪ್ಪ ಹರಿಶ್ಚಂದ್ರ ಲಮಾಣಿ ಹೇಳಿದರು.

ಭದ್ರಾ ಮೇಲ್ದಂಡೆ ಯೋಜನೆ ಮುಖ್ಯ ಇಂಜಿನಿಯರ್ ಆಗಿ ನೂತನವಾಗಿ ಅಧಿಕಾರ ವಹಿಸಿಕೊಂಡ ನಂತರ ಜಿಲ್ಲಾ ನೀರಾವರಿ ಅನುಷ್ಠಾನ ಹೋರಾಟ ಸಮಿತಿ ಪದಾಧಿಕಾರಿಗಳೊಂದಿಗೆ ಮಾತನಾಡಿದ ಅವರು ವಿಶ್ವೇಶ್ವರಯ್ಯ ನೀರಾವರಿ ನಿಗಮದ ಮೂಲಕ ಪ್ರಧಾನಿ ನರೇಂದ್ರ ಮೋದಿ, ಹಣಕಾಸು ಸಚಿವ ನಿರ್ಮಲಾ ಸೀತರಾಮನ್ ಅವರಿಗೆ ಪತ್ರ ಬರೆಯಲಾಗಿದೆ. ಲೋಕಸಭೆ ಸದಸ್ಯ ಗೋವಿಂದ ಕಾರಜೋಳ ಕೂಡಾ ಈ ಸಂಬಂಧ ಪ್ರತ್ಯೇಕ ಪತ್ರ ಬರೆದು ಕೇಂದ್ರದ ಮೇಲೆ ಒತ್ತಡ ಹೇರಲಿದ್ದಾರೆ. ಪ್ರಧಾನ ಮಂತ್ರಿ ಕಿಸಾನ್ ಸಂಚಯಿನಿ ಯೋಜನೆ ಅಥವಾ ಎಐಬಿಪಿ ಯಾವುದರಲ್ಲದೂರ ಅನುದಾನ ಒದಗಿಸುವಂತೆ ವಿನಂತಿ ಮಾಡಲಾಗಿದೆ ಎಂದರು.

ಭದ್ರಾ ಮೇಲ್ದಂಡೆ ಮಧ್ಯ ಕರ್ನಾಟಕದ ಬಯಲು ಸೀಮೆ ಪ್ರದೇಶಗಳಿಗೆ ನೀರುಣಿಸುವ ಮಹತ್ವದ ಏತ ನೀರಾವರಿ ಯೋಜನೆಯಾಗಿದೆ. ತುಂಗಾದಿಂದ ಭದ್ರಾಗೆ ಮೊದಲ ಹಂತದಲ್ಲಿ 17.40 ಟಿಎಂಸಿ ನೀರು ಮತ್ತು ಭದ್ರಾ ಜಲಾಶಯದಿಂದ ಎರಡನೇ ಹಂತದಲ್ಲಿ 29.90 ಟಿಎಂಸಿ ನೀರನ್ನು ಎತ್ತುವ ಮೂಲಕ ಬರಪೀಡಿತ ಜಿಲ್ಲೆಗಳಾದ ಚಿಕ್ಕಮಗಳೂರು, ತುಮಕೂರು, ದಾವಣಗೆರೆ, ಚಿತ್ರದುರ್ಗದಲ್ಲಿ ಸೂಕ್ಷ್ಮ ನೀರಾವರಿ ಮೂಲಕ 2,25,515 ಹೆಕ್ಟೇರ್ ಪ್ರದೇಶಕ್ಕೆ ನೀರುಣಿಸಲು ಯೋಜಿಸಲಾಗಿದೆ. ಬರಪೀಡಿತ 367 ಕೆರೆಗಳನ್ನು ತುಂಬಿಸುವ ಮೂಲಕ ಕುಡಿವ ನೀರನ್ನು ಒದಗಿಸಲಾಗುತ್ತಿದೆ ಎಂಬ ಸಂಗತಿಯ ಪತ್ರದಲ್ಲಿ ವಿವರಿಸಲಾಗಿದೆ.

ಭದ್ರಾ ಮೇಲ್ದಂಡೆ ಯ ರಾಷ್ಟ್ರೀಯ ಯೋಜನೆಯನ್ನಾಗಿ ಘೋಷಿಸುವ ಸಂಬಂಧದ ಎಲ್ಲ ಪೂರ್ವ ಸಿದ್ದತೆಗಳು ಪೂರ್ಣಗೊಳಿಸಿ ಕೇಂದ್ರ ಸಚಿವ ಸಂಪುಟದ ಮುಂದೆ ಮಂಡಿಸಲಾಗಿದೆ. 16-12-2020 ರಲ್ಲಿ ರು.21,473 ಕೋಟಿ ವೆಚ್ಚದ ಪರಿಷ್ಕೃತ ಯೋಜನೆಗೆ ಆಡಳಿತಾತ್ಮಕ ಅನುಮೋದನೆ ನೀಡಿ

ಯೋಜನೆಯ ತಾಂತ್ರಿಕ-ಆರ್ಥಿಕ ಕಾರ್ಯಸಾಧ್ಯತೆಯನ್ನು ಅಂಗೀಕರಿಸಲಾಗಿದೆ. 24.12.2020 ರಂದು ನಡೆದ ಕೇಂದ್ರ ಜಲ ಶಕ್ತಿ ಸಚಿವಾಲಯದ ಸಲಹಾ ಸಮಿತಿ ಸಭೆ, 25-03-2021 ರಂದು ನಡೆದ ಹೂಡಿಕೆ ಕ್ಲಿಯರೆನ್ಸ್ ಸಮಿತಿ ಸಭೆಯಲ್ಲಿ ರು.16,125.48 ಕೋಟಿ ಮೊತ್ತದ ಭದ್ರಾ ಮೇಲ್ದಂಡೆ ಯೋಜನೆಯ ಹೂಡಿಕೆ ತೆರವು ಪ್ರಸ್ತಾವನೆ ಅಂಗೀಕರಿಸಲಾಗಿದೆ.

ಜಲ ಶಕ್ತಿ ಸಚಿವಾಲಯ ಹೊರಡಿಸಿದ ರಾಷ್ಟ್ರೀಯ ಯೋಜನೆಯ ಅನುಷ್ಠಾನದ ಮಾರ್ಗಸೂಚಿಗಳ ಪ್ರಕಾರ, ಭದ್ರಾ ಮೇಲ್ದಂಡೆ ಯೋಜನೆಯು ರಾಷ್ಟ್ರೀಯ ಯೋಜನೆಯಲ್ಲಿ ಸೇರ್ಪಡೆಗೊಳ್ಳಲು ಅರ್ಹವಾಗಿದೆ. 15-02-2022 ರಂದು ನಡೆದ ಹೈಪವರ್ಡ್ ಸ್ಟೀರಿಂಗ್ ಕಮಿಟಿ (ಎಚ್‌ಪಿಎಸ್‌ಸಿ) ಸಭೆಯ ಮುಂದೆ ಭದ್ರಾ ಮೇಲ್ದಂಡೆ ಯೋಜನೆಯನ್ನು ರಾಷ್ಟ್ರೀಯ ಯೋಜನೆಯಾಗಿ ಸೇರಿಸುವ ಪ್ರಸ್ತಾವನೆಯನ್ನು ಇರಿಸಲಾಗಿದೆ. ಭಾರತ ಸರ್ಕಾರದ ಹಣಕಾಸು ಕಾರ್ಯದರ್ಶಿಅವರು 12.10.2022 ರಂದು ನಡೆದ ಸಾರ್ವಜನಿಕ ಹೂಡಿಕೆ ಮಂಡಳಿ (ಪಿಐಬಿ) ಸಭೆಯಲ್ಲಿ ಭದ್ರಾ ಮೇಲ್ದಂಡೆ ಯೋಜನೆಯನ್ನು ರಾಷ್ಟ್ರೀಯ ಯೋಜನೆಯಲ್ಲಿ ಸೇರಿಸಲು ಶಿಫಾರಸು ಮಾಡಿರುವುದ ಪತ್ರದಲ್ಲಿ ನೆನಪು ಮಾಡಲಾಗಿದೆ.. 2023-24 ನೇ ಸಾಲಿನ ಕೇಂದ್ರ ಬಜೆಟ್ ಭಾಷಣದ ಸಮಯದಲ್ಲಿ ಭದ್ರಾ ಮೇಲ್ದಂಡೆ ಯೋಜನೆಗೆ ರು.5300 ಕೋಟಿ ಘೋಷಿಸಲಾಗಿದ್ದು ಅನುದಾನ ಬಿಡುಗಡೆಯಾಗಿಲ್ಲ. ಕಾಮಗಾರಿ ಪ್ರಗತಿಯ ಚುರುಕುಗೊಳಿಸಲು, ರೈತರ ಹಿತಾಸಕ್ತಿ ಕಾಪಾಡಲು ಕೇಂದ್ರದ ನೆರವು ಅಗತ್ಯವಾಗಿದೆ. ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ - ವೇಗವರ್ಧಿತ ನೀರಾವರಿ ಪ್ರಯೋಜನ ಕಾರ್ಯಕ್ರಮ ಯೋಜನೆ ಅಡಿಯಲ್ಲಿ ಭದ್ರಾ ಮೇಲ್ದಂಡೆಗೆ 5300 ಕೋಟಿ ರು ಅನುದಾನ ಬಿಡುಗಡೆ ಮಾಡುವಂತೆ ಪತ್ರದಲ್ಲಿ ಕೋರಲಾಗಿದೆ ಎಂದು ಮುಖ್ಯ ಇಂಜಿನಿಯರ್ ಎಫ್.ಹೆಚ್.ಲಮಾಣಿ ಮಾಹಿತಿ ನೀಡಿದರು.

ಜಿಲ್ಲಾ ನೀರಾವರಿ ಅನುಷ್ಠಾನ ಹೋರಾಟ ಸಮಿತಿ ಕಾರ್ಯಾಧ್ಯಕ್ಷ ಬಿ.ಎ.ಲಿಂಗಾರೆಡ್ಡಿ, ಪ್ರಧಾನ ಕಾರ್ಯದರ್ಶಿ ಕೆ.ಆರ್.ದಯಾನಂದ್, ರೈತ ಸಂಘದ ಜಿಲ್ಲಾ ಉಪಾಧ್ಯಕ್ಷ ಮಲ್ಲಾಪುರ ತಿಪ್ಪೇಸ್ವಾಮಿ, ಸಮಿತಿ ಸಂಚಾಲಕ ಚಿಕ್ಕಪ್ಪನಹಳ್ಳಿ ಷಣ್ಮುಖ, ಯಾದವ ರೆಡ್ಡಿ ಉಪಸ್ಥಿತರಿದ್ದರು.

# ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳಿಗೆ ಅಭಿನಂದನೆ

» ಚಳ್ಳಕೆರೆ



ಇತ್ತೀಚಿನ ದಿನಗಳಲ್ಲಿ ಸಮಾಜದ ಎಲ್ಲಾ ವರ್ಗಗಳ ವಿದ್ಯಾರ್ಥಿಗಳನ್ನು ಗುರುತಿಸಿ ಅವರ ಪ್ರತಿಭೆಯನ್ನು ಸಾರ್ವಜನಿಕವಾಗಿ ಪರಿಚಯಿಸಿ ಅವರನ್ನು ಅಭಿನಂದಿಸುವ ಮೂಲಕ ಆತ್ಮಸ್ಥೈರ್ಯ ತುಂಬುವ ಕಾರ್ಯ ನಡೆಯುತ್ತಿದೆ. ಪ್ರತಿಯೊಬ್ಬ ವಿದ್ಯಾರ್ಥಿಯೂ ತನ್ನಲ್ಲಿರುವ ಪ್ರತಿಭೆಯನ್ನು ವ್ಯಕ್ತಪಡಿಸುವುದರಲ್ಲಿ ಹಿಂದೇಟು ಬೀಳಬಾರದು. ಪ್ರತಿಭಾಪುರಸ್ಕಾರ ವಿದ್ಯಾರ್ಥಿಗಳಿಗೆ ಹೆಚ್ಚಿನ ಶೈಕ್ಷಣಿಕ ಜ್ಞಾನವನ್ನು ತುಂಬುವುದರಲ್ಲಿ ಸಂದೇಹವಿಲ್ಲವೆಂದು ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಶಾಸಕರ ಭವನದಲ್ಲಿ ಹಿರಿಯಪತ್ರಕರ್ತ ಸೊಂಡೆಕೆರೆ ಶಿವಣ್ಣ ವಾಲ್ಮೀಕಿ ಸಮುದಾಯದ ಆಯ್ದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನ ಮಾಡುವ ಕಾರ್ಯಕ್ರಮದಲ್ಲಿ ಭಾಗವಹಿಸಿ, ವಿದ್ಯಾರ್ಥಿಗಳನ್ನು ಸನ್ಮಾನಿಸಿ ಮಾತನಾಡಿದರು. ವಿದ್ಯಾರ್ಥಿಗಳು ಜ್ಞಾನ ಸಂಪಾದನೆಗೆ ಮುಂದಾಗಬೇಕು, ಶೈಕ್ಷಣಿಕ ಪ್ರಗತಿ ನಿಮ್ಮ ಬದುಕಿಗೆ ಭದ್ರಬುನಾದಿಯನ್ನು ನೀಡಲಿದೆ. ಇಂತಹ ವಿದ್ಯಾರ್ಥಿಗಳನ್ನು ಗುರುತಿಸಿ ಗೌರವಿಸುವ ಕಾರ್ಯ ನಡೆದಿರುವುದು ಸಂತಸ ತಂದಿದೆ ಎಂದರು.ಸೊಂಡೆಕೆರೆಶಿವಣ್ಣ ಮಾತನಾಡಿ, ಪ್ರಸ್ತುತ 2024ರ ಎಸ್‌ಎಸ್‌ಎಲ್‌ಸಿ, ದ್ವಿತೀಯ ಪಿಯುಸಿಯಲ್ಲಿ ಅತಿಹೆಚ್ಚು ಅಂಕಗಳಿಸಿದ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳನ್ನು ಗುರುತಿಸಿಗೌರವಿಸಲಾಗಿದೆ. ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಿನ ವಿದ್ಯಾರ್ಥಿಗಳು ಈ ಗೌರವವನ್ನು ಪಡೆಯುವತ್ತ ಮುನ್ನೆಡೆಯಬೇಕು ಎಂದರು.

ವಿದ್ಯಾರ್ಥಿಗಳಾದ ಬಿ.ಆದಿತ್ಯ, ಪ್ರಿಯಾಂಕ, ಮಮತ, ಟಿ.ಸಿಂಚನ, ವತ್ಸಲ, ಕೆ.ಟಿ.ವಿಜಯ್, ರೈತ ಚಂದ್ರಣ್ಣನವರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಪುರಸಭೆ ಮಾಜಿ ಅಧ್ಯಕ್ಷ ಟಿ.ಪ್ರಭುದೇವ್, ನಿವೃತ್ತ ಪ್ರಾಂಶುಪಾಲ ಬಿ.ವಿ.ಸಿರಿಯಣ್ಣ, ನಾಟಕ ಅಕಾಡೆಮೆ ಮಾಜಿ ಸದಸ್ಯ ಪಿ.ತಿಪ್ಪೇಸ್ವಾಮಿ, ಮಾಜಿ ತಾಲ್ಲೂಕು ಪಂಚಾಯಿತಿ ಸದಸ್ಯ ಸಿ.ಟಿ.ಶ್ರೀನಿವಾಸ್, ಭೂತಲಿಂಗಪ್ಪ, ಸಿ.ಟಿ.ವೀರೇಶ್, ದೊರೆಅಪ್ಪಣ್ಣ, ರಾಜಣ್ಣ, ರುದ್ರೇಶ್, ಕೃಷ್ಣಮೂರ್ತಿ, ಪ್ರಹ್ಲಾದ್, ಉಳ್ಳಾರ್ತಿಗೌರೀಶ್ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.



ದೇವರಾಜ್ ಅರಸ್ ಶಿಕ್ಷಣ ಸಂಸ್ಥೆಯಲ್ಲಿ ವಿಶ್ವ ಯೋಗ ದಿನಾಚರಣೆ.



ಪ್ರಶಾಂತಿ ವಿದ್ಯಾಲಯದಲ್ಲಿ ಮಕ್ಕಳಿಂದ ಆಕರ್ಷಕ ಯೋಗ ಪ್ರದರ್ಶನ.

# 2010ರಿಂದಲೂ ಬಂಜಾರ ಬಾಲಕರ ವಿದ್ಯಾರ್ಥಿನಿಲಯದಲ್ಲಿ ಭ್ರಷ್ಠಾಚಾರ

» ಚಿತ್ರದುರ್ಗ



ನಕಲಿ ದಾಖಲೆ ಸೃಷ್ಟಿಸಿ ಪರಿಶಿಷ್ಟ ಸಮುದಾಯದ ಅನ್ನ ಕದ್ದಿರುವ ಬಂಜಾರ ಬಾಲಕರ ವಿದ್ಯಾರ್ಥಿನಿಲಯದ ಕಾರ್ಯದರ್ಶಿ ನರೇನಹಳ್ಳಿ ಅರುಣ್‌ಕುಮಾರ್ ಮೇಲೆ ಸಮಾಜ ಕಲ್ಯಾಣ ಇಲಾಖೆ ಅಧಿಕಾರಿಗಳು ಎಫ್.ಐ.ಆರ್.ದಾಖಲಿಸದೆ ಭ್ರಷ್ಠಾಚಾರಕ್ಕೆ ಕುಮ್ಮಕ್ಕು ನೀಡುತ್ತಿರುವುದನ್ನು ವಿರೋಧಿಸಿ ಬಂಜಾರ ಲಂಬಾಣಿ ಸಮಾಜದ ಜಿಲ್ಲಾಧ್ಯಕ್ಷ ಎಂ.ಸತೀಶ್‌ಕುಮಾರ್ ಶುಕ್ರವಾರ ಜಿಲ್ಲಾಡಳಿತದ ಮೂಲಕ ಸಮಾಜ ಕಲ್ಯಾಣ ಇಲಾಖೆ ಸಚಿವರು ಹಾಗೂ ರಾಜ್ಯಪಾಲರಿಗೆ ಮನವಿ ಸಲ್ಲಿಸಿದರು.

ಸರ್ಕಾರಿ ವಿಜ್ಞಾನ ಕಾಲೇಜು ಎದುರಿಗಿರುವ ಬಂಜಾರ ಬಾಲಕರ ವಿದ್ಯಾರ್ಥಿನಿಲಯದಲ್ಲಿ ಸರ್ಕಾರದ ಅನುಮತಿ ಪಡೆದು 60 ವಿದ್ಯಾರ್ಥಿಗಳಿಗೆ ಅವಕಾಶ ಕಲ್ಪಿಸಲಾಗಿತ್ತು. ಆದರೆ ಲೆಕ್ಕದಲ್ಲಿ ಮಾತ್ರ ವಿದ್ಯಾರ್ಥಿಗಳೇ ಇಲ್ಲ. ಪ್ರತಿ ವಿದ್ಯಾರ್ಥಿಗಳಿಗೆ ನೀಡುತ್ತಿದ್ದ ಭೋಜನ ವೆಚ್ಚವನ್ನು ದುರ್ಬಳಕೆ ಮಾಡಿಕೊಳ್ಳುವ ಮೂಲಕ ಸರ್ಕಾರದ ಅನುದಾನವನ್ನು ಕಬಳಿಸಲಾಗಿದೆ. ಹಾಸ್ಟೆಲ್ ವತಿಯಿಂದ ವಿದ್ಯಾರ್ಥಿಗಳ ಪಟ್ಟಿಯನ್ನು ಪಡೆದು ಚಿತ್ರದುರ್ಗದ ಜೋಗಿಮಟ್ಟಿ ರಸ್ತೆಯಲ್ಲಿರುವ ವಾಸುದೇವರೆಡ್ಡಿ ಪ್ರೌಢಶಾಲೆಯಲ್ಲಿ ಶಿಕ್ಷಣ ಪಡೆಯುತ್ತಿದ್ದಾರೆಂದು ಸಮಾಜ ಕಲ್ಯಾಣ ಇಲಾಖೆಗೆ ನೀಡಿ ಅನುದಾನ ಪಡೆಯಲಾಗಿತ್ತು. ಆದರೆ ದಾಖಲೆಯಿಟ್ಟುಕೊಂಡು ಅಲ್ಲಿಗೆ ಹೋಗಿ ಪರಿಶೀಲಿಸಿದಾಗ ಶಾಲೆಯಲ್ಲಿ ವಿದ್ಯಾರ್ಥಿಗಳೇಇರಲಿಲ್ಲಎನ್ನುವುದುಬೆಳಕಿಗೆ ಬಂದಿದೆ. 2010 ರಿಂದಲೂ ಬಂಜಾರ ಬಾಲಕರ ವಿದ್ಯಾರ್ಥಿನಿಲಯದಲ್ಲಿ ಹಗರಣ ನಡೆಯುತ್ತಿದ್ದರೂ ಇದಕ್ಕೆ ಸಂಬಂಧಪಟ್ಟಂತೆ ಸಮಾಜ ಕಲ್ಯಾಣಾಧಿಕಾರಿಯಾಗಿದ್ದ ಮಂಜುಳಮ್ಮನ ಕುಮ್ಮಕ್ಕಿನಿಂದ ನರೇನಹಳ್ಳಿ ಅರುಣ್‌ಕುಮಾರ್ ತನ್ನ ಪ್ರಭಾವ ಬೀರಿ ಕಡತಗಳನ್ನು ಕಳ್ಳತನ ಮಾಡಿಸಿದ್ದಾನೆಂದು ಮನವಿಯಲ್ಲಿ ಆಪಾದಿಸಲಾಗಿದೆ.

ಸರ್ಕಾರದ ಹಣ ದುರುಪಯೋಗಕ್ಕೆ ಸಂಬಂಧಿಸಿದಂತೆ ನರೇನಹಳ್ಳಿ ಅರುಣ್‌ಕುಮಾರ್ ಹಾಗೂ ಹಿಂದಿನ ಸಮಾಜ ಕಲ್ಯಾಣಾಧಿಕಾರಿ ಮಂಜುಳಮ್ಮನ ಮೇಲೆ ಶಿಸ್ತು ಕ್ರಮ ಕೈಗೊಳ್ಳುವಂತೆ ಸಮಾಜ ಕಲ್ಯಾಣ ಇಲಾಖೆ ಆಯುಕ್ತರು 2014 ರಿಂದಲೂ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗೆ ಪತ್ರ ಬರೆಯುತ್ತಿದ್ದರೂ ಇದುವರೆವಿಗೂ ಕ್ರಮ ಜರುಗಿಸಿಲ್ಲ. ತಕ್ಷಣವೆ ಇವರಿಬ್ಬರ ಮೇಲೆ ಕಠಿಣ ಕ್ರಮ ಕೈಗೊಳ್ಳುವಂತೆ ಎಂ.ಸತೀಶ್‌ಕುಮಾರ್ ವಿನಂತಿಸಿದರು.

## ಪ್ರಮುಖ ಸುದ್ದಿ

#### ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ

# ಪಹಣಿಗೆ ಆಧಾರ್ ಜೋಡಣೆ: ತಿಂಗಳಾಂತ್ಯಕ್ಕೆ ಪ್ರಗತಿ ಸಾಧಿಸಿ

» ಚಿತ್ರದುರ್ಗ





ಪಹಣಿಗೆ ಆಧಾರ್ ಜೋಡಣೆ ಕಾರ್ಯವನ್ನು ಪ್ರಥಮಾದ್ಯತೆಯಾಗಿ ಪರಿಗಣಿಸಿ, ತಿಂಗಳಾಂತ್ಯಕ್ಕೆ ಹಿರಿಯೂರು ತಾಲ್ಲೂಕಿನಲ್ಲಿ ಶೇ.75ಕ್ಕಿಂತಲೂ ಹೆಚ್ಚು ಪ್ರಗತಿ ಸಾಧಿಸಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಕಂದಾಯ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಹಿರಿಯೂರು ನಗರದ ಪ್ರವಾಸಿ ಮಂದಿರದಲ್ಲಿ ಶುಕ್ರವಾರ ಕಂದಾಯ ಇಲಾಖೆ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅವರು ಮಾತನಾಡಿದರು.

ಹಿರಿಯೂರು ತಾಲ್ಲೂಕು ವ್ಯಾಪ್ತಿಯಲ್ಲಿ ಪಹಣಿ ಆಧಾರ್ ಜೋಡಣೆ ಹಾಲಿ ಶೇ.48ರಷ್ಟು ಪ್ರಗತಿ ಸಾಧಿಸಲಾಗಿದ್ದು, ತಿಂಗಳಾಂತ್ಯದೊಳಗೆ ಶೇ.75ಕ್ಕಿಂತಲೂ ಹೆಚ್ಚಿನ ಪ್ರಗತಿ ಸಾಧಿಸುವಂತೆ ಸೂಚಿಸಿದ ಅವರು, ಈ ನಿಟ್ಟಿನಲ್ಲಿ ಗ್ರಾಮ ಲೆಕ್ಕಾಧಿಕಾರಿಗಳು, ರಾಜಸ್ವ ನಿರೀಕ್ಷಕರು ಅಗತ್ಯ ಕ್ರಮವಹಿಸಬೇಕು ಎಂದು ತಾಕೀತು ಮಾಡಿದರು. ಸರ್ಕಾರಿ ಆಸ್ತಿ ಸಂಗ್ರಹಿಸಲು ಡಿಜಿಟಲ್ ಪೆನ್ನಿಂಗ್ ಪೂರೈಸಲು ಸೂಚನೆ ನೀಡಿದ ಜಿಲ್ಲಾಧಿಕಾರಿಗಳು, ಭೂಮಿ ರ್‍ಯಾಂಕಿಂಗ್‌ನಲ್ಲಿ ಉತ್ತಮ ಪ್ರಗತಿ ಸಾಧಿಸಬೇಕು. ಹಕ್ಕು ಬದಲಾವಣೆ ಪ್ರಕರಣಗಳನ್ನು ಕಾಲಮಿತಿಯಲ್ಲಿ ಪೂರೈಸಬೇಕು ಎಂದು ಹೇಳಿದರು. ಸಾಮಾಜಿಕ ಭದ್ರತಾ ಯೋಜನೆಯಡಿ ಪಿಂಚಣಿ ಪಡೆಯುವ ಎಲ್ಲಾ ಫಲಾನುಭವಿಗಳಿಗೆ ಎನ್‌ಪಿಸಿ ಮ್ಯಾಪಿಂಗ್ ಹಾಗೂ ಆಧಾರ್ ಜೋಡಣೆಯನ್ನು ಶೇ.100ರಷ್ಟು ಪ್ರಗತಿ ಸಾಧಿಸಬೇಕು. ಬಾಕಿ ಇರುವ ಪ್ರಕರಣಗಳನ್ನು ಆದ್ಯತೆ ಮೇರೆಗೆ ಕ್ರಮವಹಿಸಲು ಸೂಚಿಸಿದರು. ಸಭೆಯಲ್ಲಿ ಗ್ರೇಡ್-2 ತಹಶೀಲ್ದಾರ್ ಕೃಷ್ಣಪ್ಪ, ಉಪ ತಹಶೀಲ್ದಾರ್‌ಗಳು, ಶಿರಸ್ತೆದಾರರು, ರಾಜಸ್ವ ನಿರೀಕ್ಷಕರು ಹಾಗೂ ಗ್ರಾಮಲೆಕ್ಕಾಧಿಕಾರಿಗಳು ಇದ್ದರು. ಹಿರಿಯೂರು ನಗರಸಭೆ ಪ್ರಗತಿ ಪರಿಶೀಲನಾ ಸಭೆ: ಕುಡಿಯುವ ನೀರು ಕಲುಷಿತವಾಗದಂತೆ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು. ನಿಯಮಿತವಾಗಿ ಕುಡಿಯುವ ನೀರನ್ನು ಪರೀಕ್ಷೆ ಮಾಡಿಸಿ, ಜನರಿಗೆ ಶುದ್ಧ ಕುಡಿಯುವ ನೀರು ಪೂರೈಸಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ನಗರಸಭೆ ಪೌರಾಯುಕ್ತರಿಗೆ ಸೂಚನೆ ನೀಡಿದರು.

ಸ್ವಚ್ಛತೆ, ನೀರು ಸರಬರಾಜು, ಬೀದಿದೀಪಗಳ ನಿರ್ವಹಣೆಯನ್ನು ಸಮರ್ಪಕವಾಗಿ ನಿರ್ವಹಿಸಬೇಕು. ಯಾವುದೇ ಕಾರಣಕ್ಕೂ ಸಾರ್ವಜನಿಕರಿಂದ ದೂರುಗಳು ಬಾರದಂತೆ ನಗರಸಭೆ ಅಧಿಕಾರಿಗಳು ಹಾಗೂ ಸಿಬ್ಬಂದಿ ಕಾರ್ಯನಿರ್ವಹಿಸಬೇಕು ಎಂದು ಹೇಳಿದರು. ನಗರಸಭೆ ವ್ಯಾಪ್ತಿಯ 15ನೇ ಹಣಕಾಸು ಯೋಜನೆ, ಸ್ವಚ್ಛ ಭಾರತ್ ಮಿಷನ್ 1 ಮತ್ತು 2 ಸೇರಿದಂತೆ ವಿವಿಧ ಯೋಜನೆಗಳ ಕುರಿತು ಮಾಹಿತಿ ಪಡೆದು ಪ್ರಗತಿ ಪರಿಶೀಲನೆ ನಡೆಸಿದರು.

## ಫಾಸ್ಟ್ ನ್ಯೂಸ್

### ಪ್ರಥಮ ವರ್ಷದ ಡಿಪ್ಲೋಮಾ: ಪ್ರವೇಶ ಅವಧಿ ವಿಸ್ತರಣೆ

» ಚಿತ್ರದುರ್ಗ

2024–25ನೇ ಶೈಕ್ಷಣಿಕ ಸಾಲಿನಲ್ಲಿ ಹಿರಿಯೂರು ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಯಲ್ಲಿ ಆನ್‌ಲೈನ್ ಮೂಲಕ ಸೀಟು ಹಂಚಿಕೆಯಾದ ನಂತರ ಭರ್ತಿಯಾಗದೇ ಉಳಿದಿರುವ ಸೀಟುಗಳನ್ನು ಪ್ರಾಂಶುಪಾಲರ ಹಂತದಲ್ಲಿ ಆಫ್‌ಲೈನ್ ಮೂಲಕ ಪ್ರಥಮ ವರ್ಷದ ಡಿಪ್ಲೋಮಾ ಸೀಟುಗಳಿಗೆ ಅರ್ಹ ಅಭ್ಯರ್ಥಿಗಳು ಸಂಸ್ಥೆಗೆ ಹಾಜರಾಗಿ ಪ್ರವೇಶ ಪಡೆಯಲು ಪ್ರವೇಶಾವಧಿಯನ್ನು ಜೂನ್ 29 ರವರೆಗೆ ವಿಸ್ತರಿಸಲಾಗಿದೆ. ಅಭ್ಯರ್ಥಿಗಳು ಮೂಲ ಎಸ್.ಎಸ್.ಎಲ್.ಸಿ ಅಂಕಪಟ್ಟಿ, ಮೂಲ ವರ್ಗಾವಣೆ ಪತ್ರ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಕನ್ನಡ ಮಾಧ್ಯಮ, ಗ್ರಾಮೀಣ ಮಾಧ್ಯಮ ಹಾಗೂ ವ್ಯಾಸಂಗ ಪ್ರಮಾಣ ಪತ್ರದೊಂದಿಗೆ ಅರ್ಜಿ ಸಲ್ಲಿಸಿ ಪ್ರವೇಶ ಪಡೆಯಲು ಜೂನ್ 29ರವರೆಗೆ ಅವಧಿಯನ್ನು ವಿಸ್ತರಿಸಲಾಗಿದೆ ಹೆಚ್ಚಿನ ಮಾಹಿತಿಗಾಗಿ ಸಂಸ್ಥೆ ಕಚೇರಿಯ ಪ್ರವೇಶ ವಿಭಾಗದ ದೂರವಾಣಿ ಸಂಖ್ಯೆ 9900337587, 9482787542 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

### ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ವಿವಿಧ ಸೌಲಭ್ಯಗಳಿಗಾಗಿ ಅರ್ಜಿ ಆಹ್ವಾನ

» ದಾವಣಗೆರೆ

ಪ್ರಸಕ್ತ ಸಾಲಿನ ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ವಿವಿಧ ಮೂಲಭೂತ ಸೌಕರ್ಯ ಅಭಿವೃದ್ಧಿ ಘಟಕಗಳಾದ ನೀರು ಸಂಗ್ರಹಣ ಘಟಕಗಳಾದ ಕೃಷಿ ಹೊಂಡ, ಸಮುದಾಯ ಕೃಷಿ ಹೊಂಡ, ಕೊಯ್ಲೋತ್ತರ ಸಂಸ್ಕರಣ ಘಟಕಗಳನ್ನು ಹಾಗೂ ಇತರೆ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ರೈತರು ಇದರ ಸೌಲಭ್ಯ ಪಡೆಯಲು ಜಗಳೂರು ತಾಲ್ಲೂಕಿನ ರೈತರು ತೋಟಗಾರಿಕೆ ಇಲಾಖೆಯಲ್ಲಿ ತಮ್ಮ ಹೆಸರು ನೋಂದಾಯಿಸಬಹುದಾಗಿರುತ್ತದೆ. ಅರ್ಜಿ ಸಲ್ಲಿಸಲು ಜುಲೈ 8 ಕೊನೆಯ ದಿನವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಹೋಬಳಿ ಮಟ್ಟದ ಅಧಿಕಾರಿಗಳಾದ ಪ್ರಸನ್ನ ಕುಮಾರ್ ಜಿ ಎಚ್ 910838179 (ಕಸಬಾ), ವೆಂಕಟೇಶ್ವರ ನಾಯಕ್ 890472145 (ಬಿಳಿಚೋಡು), ಸುನಿಲ್ ಕುಮಾರ್ ಇವರನ್ನು ಸಂಪರ್ಕಿಸಲು ಹಿರಿಯ ತೋಟಗಾರಿಕೆ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

### ಸಿಇಟಿ, ನೀಟ್ ವಿದ್ಯಾರ್ಥಿಗಳಿಗೆ ಅರಿವು ಸಾಲ ಯೋಜನೆಯಡಿಯಲ್ಲಿ ಸಾಲಕ್ಕಾಗಿ ಅನ್‌ಲೈನ್ ಮೂಲಕ ಅರ್ಜಿ ಅಹ್ವಾನ

» ದಾವಣಗೆರೆ

ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಆಯ್ಕೆಯಾಗುವ ಸಿಇಟಿ, ನೀಟ್ ಮುಖಾಂತರ ಎಂ.ಬಿ.ಬಿ.ಎಸ್, ಬಿ.ಡಿ.ಎಸ್, ಬಿ.ಇ, ಬಿ.ಟೆಕ್, ಮತ್ತು ಅಯುಷ್ ಕೋರ್ಸ್‌ಗಳಿಗೆ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ಅರಿವು ಯೋಜನೆಯಡಿಯಲ್ಲಿ ವಿಧ್ಯಾಭ್ಯಾಸ ಸಾಲ ಪಡೆಯಲು ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ನಿಗಮದ ವೆಬ್‌ಸೈಟ್ kmdconline.karnataka.gov.in ಮೂಲಕ ಆನ್‌ಲೈನ್ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಜೂ.21 ರಿಂದ ಪ್ರಾಂಭವಾಗಿರುತ್ತದೆ ಹಾಗೂ ಸಲ್ಲಿಸಿದ ಹಾರ್ಡ್ ಕಾಪಿಗಳನ್ನು ಸಂಬಂಧ ಪಟ್ಟ ಜಿಲ್ಲಾ ವ್ಯವಸ್ಥಾಪಕರ ಕಛೇರಿಗೆ ಜುಲೈ 7 ರೊಳಗಾಗಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ವ್ಯವಸ್ಥಾಪಕರ ಕಛೇರಿ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ(ನಿ),ಕುರುಬರ ಹಾಸ್ಟೆಲ್ ಕಟ್ಟಡ, ಹದಡಿರಸ್ತೆ, ಜಯದೇವ ಸರ್ಕಲ್ ಹತ್ತಿರ, ದೂ.ಸಂ. 08192–232349, ಸಂಪರ್ಕಿಸಬಹುದು.

### ಸಮಾಲೋಚಕರ ಹುದ್ದೆಗೆ ತಾತ್ಕಾಲಿಕವಾಗಿ ಗುತ್ತಿಗೆ, ಹೊರಗುತ್ತಿಗೆಯಡಿ ಅರ್ಜಿ

» ದಾವಣಗೆರೆ

ಜಿಲ್ಲೆಯ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದಲ್ಲಿ ಜಲ ಜೀವನ್ ಮೀಷನ್ ಯೋಜನೆಯಡಿ ಖಾಲಿ ಇರುವ ಜಿಲ್ಲಾ ಎಂಐಎಸ್, ಎಂಐಎಸ್ ಸಮಾಲೋಚಕರ ಹುದ್ದೆಗೆ ತಾತ್ಕಾಲಿಕವಾಗಿ ಗುತ್ತಿಗೆ, ಹೊರಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲು ಅರ್ಜಿ ಆಹ್ವಾನಿಸಲಾಗಿದ್ದು ಆಸಕ್ತ ಅಭ್ಯರ್ಥಿಗಳು ಮಾನ್ಯತೆ ಪಡೆದ ವಿಶ್ವವಿದ್ಯಾನಿಲಯದಿಂದ ಎಂ.ಸಿ.ಎ, ಎಂ.ಎಸ್ಸಿ ಕಂಪ್ಯೂಟರ್ ಸೈನ್ಸ್, ಬಿ.ಇ ಕಂಪ್ಯೂಟರ್ ಸೈನ್ಸ್‌ಲ್ಲಿ ಸ್ನಾತಕೋತ್ತರ ಪದವಿ ಪಡೆದಿರಬೇಕು ಹಾಗೂ ಡೇಟಾ ನಿರ್ವಹಣೆಯಲ್ಲಿ 3–5 ವರ್ಷಗಳ ಅನುಭವ ಹೊಂದಿರಬೇಕು. ಅರ್ಜಿ ಸಲ್ಲಿಸಲು ಜು.5 ರಂದು ಕೊನೆಯ ದಿನವಾಗಿದೆ. ಹೆಚ್ಚಿನ ಮಾಹಿತಿಗಾಗಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ ಕಾರ್ಯನಿರ್ವಾಹಕ ಇಂಜಿನಿಯರ್ ದಾವಣಗೆರೆ ಇವರನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದು.

# ನೂತನ ಕಾನೂನುಗಳು ಬದಲಾವಣೆ ಜತೆ ಸುರಕ್ಷಾ ಸಮಾಜ ನಿರ್ಮಾಣಕ್ಕೆ ಸಹಾಯಕ

» ದಾವಣಗೆರೆ

ದೇಶದಲ್ಲಿ ಜಾರಿಯಾಗಿರುವ 3 ನೂತನ ಕಾನೂನುಗಳು ಸಮಾಜದಲ್ಲಿ ಬದಲಾವಣೆ ತಂದು ಸುರಕ್ಷತೆಯ ಸಮಾಜ ನಿರ್ಮಾಣ ಮಾಡುವಲ್ಲಿ ಸಹಾಯಕ ಆಗಲಿವೆ ಎಂದು ಭಾರತದ ಲೋಕಪಾಲ ನ್ಯಾಯಾಂಗ ಸದಸ್ಯರೂ, ಹಿಮಾಚಲ ಪ್ರದೇಶದ ಉಚ್ಚ ನ್ಯಾಯಾಲಯದ ವಿಶ್ರಾಂತ ಮುಖ್ಯ ನ್ಯಾಯಮೂರ್ತಿ ಎಲ್.ನಾರಾಯಣಸ್ವಾಮಿ ಅಭಿಪ್ರಾಯ ಪಟ್ಟರು.

ಜಿಲ್ಲಾ ವಕೀಲರ ಸಂಘ, ದಾವಣಗೆರೆ ವತಿಯಿಂದ ನಗರದ ವಕೀಲರ ಸಾಂಸ್ಕೃತಿಕ ಸಮುದಾಯ ಭವನದಲ್ಲಿ ಭಾರತೀಯ ನ್ಯಾಯ ಸಂಹಿತೆ, ಭಾರತೀಯ ನಾಗರೀಕ ಸುರಕ್ಷ ಸಂಹಿತೆ, ಭಾರತೀಯ ಸಾಕ್ಷಿ ಅಧಿನಿಯಮ–2023 ಕುರಿತು ಆಯೋಜಿಸಲಾಗಿದ್ದ ಉಪನ್ಯಾಸ ಮಾಲಿಕೆ–9ನ್ನು ಉದ್ಘಾಟಿಸಿ, ಜಿಲ್ಲಾ ವಕೀಲರ ಸಂಘ ಹೊರತಂದಿರುವ ನೂತನ ಕಾಯಿದೆಗಳ ಕೈಪಿಡಿಯನ್ನು ಬಿಡುಗಡೆ ಮಾಡಿದ ನಂತರ ಮಾತನಾಡಿದರು.



ನಮ್ಮ ದೇಶದ ಸಂಸತ್ತಿನ ಮೂಲಕ ನಮ್ಮ ದೇಶದಲ್ಲಿ ನೂತನ ಕಾನೂನುಗಳನ್ನು ಜಾರಿಗೆ ತರಲಾಗಿದೆ. ಹಾಗಾಗಿ ಇವುಗಳ ಜಾರಿ ಹಾಗೂ ಪಾಲನೆ ಮಾಡುವುದು ನಮ್ಮೆಲ್ಲರ ಜವಾಬ್ದಾರಿ. ವಿದೇಶಗಳಲ್ಲಿ ಗಮನಿಸಿದರೆ ಅಲ್ಲಿನ ಶಿಕ್ಷೆಯ ಪ್ರಮಾಣ ಶೇ.90ರಷ್ಟು ಇದೆ. ನಮ್ಮಲ್ಲಿ ಶಿಕ್ಷೆಯ ಪ್ರಮಾಣ ತೀರಾ ಕಡಿಮೆ. ಕಾರಣ ಹಳೇ ಬೇರು ಹೊಸ ಚಿಗುರು ಸೇರಿಕೊಂಡು ಸ್ವಾಸ್ಥ್ಯ ಸಮಾಜ ನಿರ್ಮಾಣ ಮಾಡಲಿ ಎಂದು ಹಾರೈಸಿದರು.

ದೇಶದಲ್ಲಿ ಈಗಾಗಲೇ ಹಲವಾರು ಕ್ರಿಮಿನಲ್ ಕಾನೂನುಗಳನ್ನು ತಿದ್ದುಪಡಿ ಮಾಡಲಾಗಿದ್ದು, ಯಾವುದೇ ಬದಲಾವಣೆ ಮಾಡಿಲ್ಲ. ಇದನ್ನು ಯಾರು ಮಾಡಿದ್ದಾರೆ ಎನ್ನುವ ಬಗ್ಗೆ ಚಿಂತನೆ ನಡೆಸುವ ಬದಲು ಅವುಗಳನ್ನು ಸೂಕ್ತ ರೀತಿಯಲ್ಲಿ ಉಪಯೋಗಿಸಿಕೊಳ್ಳುವ ನಿಟ್ಟಿನಲ್ಲಿ ನ್ಯಾಯಾಧೀಶರು, ನ್ಯಾಯವಾದಿಗಳು ಮುಂದಾಗಬೇಕಿದೆ ಎಂದು ಕರೆ ನೀಡಿದರು. ಆದರೆ, ಇಲ್ಲಿ ನಮಗೆ ಎದುರಾಗುವ ಪ್ರಶ್ನೆಯೆಂದರೆ, ನಮ್ಮ ಕಾನೂನುಗಳು ವಿಫಲವಾಗಿವೆಯೇ ಎನ್ನುವುದು. ನಾವೇನು ಮಾಡಬೇಕು ಎನ್ನುವುದಾದರೆ ಒಂದು ವೇಳೆ ಕಾನೂನಿನಲ್ಲಿ ಕೆಲ ಬದಲಾವಣೆ ತರಲು ತಿದ್ದುಪಡಿ ಅಗತ್ಯವಾಗಿರುತ್ತದೆ. ನಮ್ಮ ನ್ಯಾಯಾಂಗವು ಆರೋಪಿಗಳಿಗೆ ಶಿಕ್ಷೆ ಕೊಡಿಸುವಲ್ಲಿ ಮುಂದಾಗಿದ್ದು, ಅದರ ಪ್ರಮಾಣ ಅರಿಯಬೇಕಿದೆ. ನಮ್ಮಲ್ಲಿ ಶೇ.50ಕ್ಕಿಂತಲೂ ಶಿಕ್ಷೆಯ ಪ್ರಮಾಣ ಕಡಿಮೆ ಇದೆ ಎಂದರು.ನ್ಯಾಯ ಕೊಡಿಸುವಲ್ಲಿ ವಿಳಂಬಾವಾದರೆ ನಾವುಗಳು ಅಭಿಯೋಜನೆ ವಿಫಲವೇ, ತನಿಖೆ ವಿಫಲವೇ, ನ್ಯಾಯವಾದಿಗಳು ವಿಫಲವೇ ಅಥವಾ ನ್ಯಾಯಾಧೀಶರು ನ್ಯಾಯದಾನ ಮಾಡುವಲ್ಲಿ ವಿಫಲರಾಗಿದ್ದಾರೆಯೇ, ಇದಲ್ಲದೇ ಆರ್ಟಿಕಲ್‌ಗಳು ವಿಫಲವಾಗಿವೆ ಎನ್ನುವ ಚಿಂತನೆ ನಡೆಸಬೇಕು. ಈಗ ಹೊಸ ಕಾನೂನುಗಳು ಇಂತಹ ಚಿಂತನೆಯನ್ನು ಹೊಡೆದು ಹಾಕಲಿವೆ. ನ್ಯಾಯಾಂಗಕ್ಕೆ ಸಹಕಾರಿ ಆಗಲಿವೆ ಎಂದು ಹೇಳಿದರು.

ಈ ಅಧಿನಿಯಮಗಳು ಶಿಕ್ಷೆಯ ಪ್ರಮಾಣವನ್ನು ಅಪರಾಧಿಗಳಿಗೆ ತಿಳುವಳಿಕೆ ನೀಡುವ ರೀತಿಯಲ್ಲಿ ಇರಬೇಕು. ಅಲ್ಲದೇ ಜತೆಯಲ್ಲಿ ಅಪರಾಧ ಮಾಡಿದ ಆರೋಪಿಗಳಿಗೆ ಶಿಕ್ಷೆಯನ್ನು ಕೊಡಿಸುವ ಮೂಲಕ ಶಿಕ್ಷೆಯ ಪ್ರಮಾಣ ಹೆಚ್ಚಳ ಮಾಡಿದಾಗ ಮಾತ್ರ ಈ ನೂತನ ಕಾನೂನುಗಳಿಗೆ ಮಹತ್ವ ಬರಲಿದೆ. ಒಂದು ವೇಳೆ ಶಿಕ್ಷೆ ದೊರೆಯುವ ಪ್ರಕರಣಗಳಲ್ಲಿ ವಕೀಲರಿಂದ, ನ್ಯಾಯಾಂಗದಿಂದ ವಿಳಂಬವಾದರೆ ಅವುಗಳೇ ಹೊಣೆಯಾಗಲಿವೆ. ಆದರೆ, ಪ್ರಯೋಗಾತ್ಮಕವಾಗಿ 5 ವರ್ಷ ಜಾರಿಗೆ ತಂದು ಶಿಕ್ಷೆಯ ಪ್ರಮಾಣ ಹಿಂದಿನಂತೆಯೇ ಇದ್ದರೆ ಇಂತಹ ತಿದ್ದುಪಡಿಗಳಿಂದ ಏನು ಪ್ರಯೋಜನ ಎಂದು ಪ್ರಶ್ನೆ ಮಾಡಬಹುದು. ನಮ್ಮಲ್ಲಿನ ವ್ಯವಸ್ಥೆಯಲ್ಲಿ ತುಂಬಾ ಬದಲಾವಣೆ ಆಗಿದ್ದು, ಸಂವಿಧಾನದಲ್ಲೂ ಬೇಡಿಕೆಗೆ ತಕ್ಕಂತೆ ಹಲವು ತಿದ್ದುಪಡಿ ಆಗಿವೆ ಎಂದು ಸ್ಪಷ್ಟನೆ ನೀಡಿದರು.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ರಾಜೇಶ್ವರಿ ಎನ್.ಹೆಗಡೆ ಮಾತನಾಡಿ ಸರಳತೆ, ಸಾಮಾಜಿಕ ಕಳಕಳಿ, ವಕೀಲರ ಬಗ್ಗೆ ಕಳಕಳಿ ಹೊಂದಿರುವ ನಿವೃತ್ತ ನ್ಯಾಯಮೂರ್ತಿ ಎಲ್.ನಾರಾಯಣಸ್ವಾಮಿ ಅವರ ಆದರ್ಶಗಳನ್ನು ನಾವೆಲ್ಲರೂ ಮೈಗೂಡಿಸಿಕೊಳ್ಳಬೇಕು. ವಕೀಲರ ಬಗ್ಗೆ ಸದಾ ಚಿಂತನೆ ಮಾಡುವ, ಅವರ ಏಳಿಗೆಗೆ ಕೈ ಜೋಡಿಸುವ ನಿಟ್ಟಿನಲ್ಲಿ ಸದಾ ಸಿದ್ಧರಿದ್ದಾರೆ. ನೂತನ ಮೂರು ಕಾಯಿದೆಗಳ ಬಗ್ಗೆ ತಿಳಿದುಕೊಳ್ಳಲು ಮುಂಬರುವ ದಿನಗಳಲ್ಲಿ ಕಾರ್ಯಾಗಾರ ನಡೆಸಲಾಗುವುದು. ನೂತನ ಕಾಯಿದೆಗಳು ಎಲ್ಲರಿಗೂ ಅನುಕೂಲ ಆಗಲಿದೆ ಎಂದರು.

ಅಧ್ಯಕ್ಷತೆ ವಹಿಸಿ ಪ್ರಾಸ್ತಾವಿಕವಾಗಿ ಮಾತನಾಡಿದ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಲ್.ಹೆಚ್.ಅರುಣ್ ಕುಮಾರ್, ಸಮ ಸಮಾಜ ನಿರ್ಮಾಣಕ್ಕೆ ಶ್ರಮಿಸುವ ವಕೀಲರಿಗೆ ಸಾಮಾಜಿಕ ಭದ್ರತೆ ಇಲ್ಲದಂತಾಗಿದೆ. ಅದರಲ್ಲೂ ಗ್ರಾಮಾಂತರ ಪ್ರದೇಶದ ವಕೀಲರಿಗೆ ಅಪಘಾತ, ಕಾಯಿಲೆಗಳು ಎದುರಾದಾಗ ಅವರ ಕುಟುಂಬಗಳು ಹಲವಾರು ಸಂಕಷ್ಟಗಳನ್ನು ಎದುರಿಸಿವೆ. ಈ ನಿಟ್ಟಿನಲ್ಲಿ ಲೋಕಪಾಲ ನ್ಯಾಯಾಂಗ ಸದಸ್ಯರು ರಾಜ್ಯ ವಕೀಲರ ಸಂಘದೊಂದಿಗೆ ಚರ್ಚಿಸಿ, ಮರಣೋತ್ತರವಾಗಿ ನೀಡುವ ಸಹಾಯಧನದ ಮೊತ್ತವನ್ನು ಹೆಚ್ಚಳ ಮಾಡಿಸಬೇಕೆಂದು ಮನವಿ ಮಾಡಿದರು.

ವೇದಿಕೆಯಲ್ಲಿ ಮುಖ್ಯ ಅತಿಥಿಗಳಾಗಿ 1ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಮಂಜಪ್ಪ ಹನುಮಂತಪ್ಪ ಅಣ್ಣಯ್ಯನವರ, 2ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಆರ್.ಎನ್.ಪ್ರವೀಣ್‌ಕುಮಾರ್ ಹಾಗೂ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರೂ, ಎಸ್‌ಟಿಎಫ್‌ಸಿ ಆದ ಶ್ರೀರಾಮ ನಾರಾಯಣ ಹೆಗಡೆ ಇದ್ದರು. ಇದೇ ವೇಳೆ ವಕೀಲರಾದ ಚಂದ್ರಪ್ಪ, ಎಸ್.ಪರಮೇಶ್, ಕಾರ್ಯಕಾರಿ ಸಮಿತಿ ಸದಸ್ಯೆ ಎಸ್.ಭಾಗ್ಯಲಕ್ಷ್ಮಿ, ಬ್ಯಾಂಕ್ ಫೀಲ್ಡ್ ಆಫೀಸರ್ ರೇಣುಕಯ್ಯ ಅವರನ್ನು ಇದೇ ವೇಳೆ ಸನ್ಮಾನಿಸಲಾಯಿತು. ಇದೇ ವೇಳೆ ಅಪಘಾತದಲ್ಲಿ ಮೃತಪಟ್ಟ ವಕೀಲ ನಿಂಗಪ್ಪರ ವಾರಸುದಾರರಿಗೆ ಮರಣೋತ್ತರ ಪರಿಹಾರ ನಿಧಿಯನ್ನು ನ್ಯಾಯಮೂರ್ತಿಗಳಿಂದ ವಿತರಿಸಲಾಯಿತು. ಈ ವೇಳೆ ಉಪಾಧ್ಯಕ್ಷ ಜಿ.ಕೆ.ಗೋಪನಾಳು ಬಸವರಾಜು, ಕಾರ್ಯದರ್ಶಿ ಎಸ್.ಬಸವರಾಜ, ಕಾರ್ಯಕಾರಿ ಸಮಿತಿ ಸದಸ್ಯರಾದ ಬಿ.ಅಜ್ಜಯ್ಯ, ಆರ್.ಭಾಗ್ಯಲಕ್ಷ್ಮಿ, ಎಂ.ಚೌಡಪ್ಪ, ಟಿ.ಹೆಚ್.ಮಧುಸೂಧನ್, ಎಲ್.ನಾಗರಾಜ್, ಕೆ.ಎಂ.ನೀಲಕಂಠಯ್ಯ, ಎಂ.ರಾಘವೇಂದ್ರ, ಸಂತೋಷ್‌ಕುಮಾರ್, ಜಿ.ಜೆ.ವಾಗೀಶ ಕಟಗಿಹಳ್ಳಿ ಮಠ ಇತರರು ಇದ್ದರು.

## ಸ್ವಾಮಿತ್ವ ಯೋಜನೆಯ ಕುರಿತು ಗ್ರಾಮ ಸಭೆ

» ಚಿತ್ರದುರ್ಗ

ಜಿಲ್ಲೆಯ ಹಿರಿಯೂರು ತಾಲ್ಲೂಕಿನ ಜೆ.ಜಿ.ಹಳ್ಳಿ ಹೋಬಳಿಯ ದಿಂಡಾವರ ಗ್ರಾಮ ಪಂಚಾಯ್ತಿ ವ್ಯಾಪ್ತಿಗೊಳಪಡುವ ಲಕ್ಕೇನಹಳ್ಳಿ ಗ್ರಾಮದಲ್ಲಿ ಶುಕ್ರವಾರ ಸ್ವಾಮಿತ್ವ ಯೋಜನೆಯ ಕುರಿತು ಗ್ರಾಮ ಸಭೆ ನಡೆಸಲಾಯಿತು.



ಭೂ ಮಾಪನಾ ಇಲಾಖೆ ಸೂಪರ್‌ವೈಸರ್ ರಮೇಶ್ ಮಾತನಾಡಿ, ಸ್ವಾಮಿತ್ವ ಯೋಜನೆಯು ಕೇಂದ್ರ ಸರ್ಕಾರ ಪ್ರಾಯೋಜಿತ ಮಹತ್ವಾಕಾಂಕ್ಷಿ ಯೋಜನೆಯಾಗಿದ್ದು, ಇದರಿಂದ ಗ್ರಾಮ ಪಂಚಾಯಿತಿಗೆ ಒಳಪಡುವ ಆಸ್ತಿಗಳಿಗೆ ಪಿ.ಆರ್.ಕಾರ್ಡ್‌ಗಳನ್ನು (ಹಕ್ಕು ಪತ್ರ) ನೀಡುವ ಯೋಜನೆಯಾಗಿದೆ. ವ್ಯವಸಾಯ ಭೂಮಿಗಳಿಗೆ ಇರುವ ಮಾಲೀಕತ್ವದ ಪಹಣಿ, ಪಟ್ಟಾ ದಾಖಲೆಗಳಂತೆ ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಒಳಪಡುವ ಆಸ್ತಿಗಳಿಗೆ ಮಾಲೀಕತ್ವ ದಾಖಲೆಗಳನ್ನು ನೀಡುವ ಯೋಜನೆಯಾಗಿದೆ ಎಂದರು.

ಈ ಯೋಜನೆಯನ್ನು ಚಿತ್ರದುರ್ಗ ಭೂ ದಾಖಲೆಗಳ ಉಪನಿರ್ದೇಶಕ ರಾಮಾಂಜನೇಯ ಹಾಗೂ ಭೂ ದಾಖಲೆಗಳ ಸಹಾಯಕ ನಿರ್ದೇಶಕ ಏಕನಾಥ್ ಅವರ ಮಾರ್ಗದರ್ಶನದಲ್ಲಿ ನಡೆಸಲಾಗುವುದು ಎಂದರು.

ಭೂ ಮಾಪನ ಇಲಾಖೆಯ ಪ್ರಭಾರ ಅಧೀಕ್ಷಕ ಕೆಂಪಣ್ಣ ಅವರು, ಪಿ.ಆರ್.ಕಾರ್ಡ್‌ಗಳಿಂದ ಸಾರ್ವಜನಿಕರಿಗೆ ಆಗುವ ಅನುಕೂಲಗಳ ಬಗ್ಗೆ ವಿವರಿಸಿದರು. ಸಭೆಯಲ್ಲಿ ದಿಂಡಾವರ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಲೋಕೇಶ್, ಗ್ರಾಮ ಪಂಚಾಯಿತಿ ಅಧ್ಯಕ್ಷರು ಹಾಗೂ ಸದಸ್ಯರು ಉಪಸ್ಥಿತರಿದ್ದರು.

## ಪೆಟ್ರೋಲ್-ಡೀಸೆಲ್ ಬೆಲೆ ಏರಿಕೆ ಟ್ರಕ್ಕರ್ ಅಸೋಸಿಯೇಷನ್ ಮನವಿ



» ಚಿತ್ರದುರ್ಗ

ರಾಜ್ಯ ಸರ್ಕಾರ ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ಏರಿಸಿರುವುದನ್ನು ಖಂಡಿಸಿ ಜಿಲ್ಲಾ ಟ್ರಕ್ಕರ್ ಅಸೋಸಿಯೇಷನ್ ವತಿಯಿಂದ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಲಾಯಿತು. ಪೆಟ್ರೋಲ್–ಡೀಸೆಲ್ ಬೆಲೆ ಜಾಸ್ತಿಯಾಗಿರುವುದರಿಂದ ಟೈರ್ ಮತ್ತು ಬಿಡಿ ಭಾಗಗಳ ಬೆಲೆ ಏರಿಕೆಯಾಗಿದ್ದು, ಲಾರಿ ಮಾಲೀಕರ ಜೀವನ ದುಸ್ತರವಾಗಿದೆ. ವಿಎಲ್‌ಟಿ ಮತ್ತು ಪ್ಯಾನಿಕ್ ಬಟನ್ ಹೊರೆಯೂ ಲಾರಿ ಮಾಲೀಕರ ಮೇಲೆ ಹೇರಿದಂತಾಗಿದೆ. ಇದೆಲ್ಲದರ ಪರಿಣಾಮ ಸಾಗಾಣಿಕೆ ವೆಚ್ಚವು ದುಬಾರಿಯಾಗುತ್ತದೆ.

**ಪ್ರಮುಖ ಸುದ್ದಿ**

# ಮನಸಿನ ಏಕಾಗ್ರತೆಗೆ ಧ್ಯಾನ, ಯೋಗ ಸಹಕಾರಿ: ಪ್ರಭಾ

» ದಾವಣಗೆರೆ

ಮಾನಸಿಕ ಏಕಾಗ್ರತೆಯನ್ನು ಕಾಪಾಡಿಕೊಳ್ಳಲು ಯೋಗ ಮತ್ತು ಧ್ಯಾನ ಬಹಳ ಮುಖ್ಯ ಎಂದು ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್ ತಿಳಿಸಿದರು.

ಶುಕ್ರವಾರ ನಗರದ ಹೈಸ್ಕೂಲ್ ಮೈದಾನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆಯುಷ್ ಇಲಾಖೆ, ಮಹಾನಗರ ಪಾಲಿಕೆ, ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿ.ವಿ, ಶ್ರೀಪತಂಜಲಿ ಯೋಗ ಶಿಕ್ಷಣ ಸಮಿತಿ, ಜಿಲ್ಲಾ ಯೋಗ ಒಕ್ಕೂಟ, ದಾವಣಗೆರೆ ಈವರ ಸಹಯೋಗದಲ್ಲಿ ಆಯೋಜಿಸಲಾಗಿದ್ದ 10 ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆಯನ್ನು ಉದ್ಘಾಟಿಸಿ ಮಾತಾನಾಡಿದರು.



ಈ ಬಾರಿಯ ಯೋಗ ದಿನವನ್ನು ಸ್ವಂತ ಮತ್ತು ಸಮಾಜಕ್ಕಾಗಿ ಯೋಗ ಎಂಬ ಘೋಷದಡಿ ಆಚರಿಸಲಾಗುತ್ತಿದೆ. ಯೋಗಾಭ್ಯಾಸದಿಂದ ಆರೋಗ್ಯಕರ ಜೀವನ ನಡೆಸಬೇಕು ಎಂದರು. ಯೋಗ ಎಂಬುದು ಒಂದು ದಿನದ ಚಟುವಟಿಕೆ ಅಲ್ಲ, ಅದು ಜೀವನದ ಒಂದು ಭಾಗ, ಪ್ರತಿಯೊಬ್ಬರು ಪ್ರತಿದಿನ ಯೋಗ ಮಾಡುವುದರಿಂದ ಉತ್ತಮ ಆರೋಗ್ಯ, ನಿರ್ಮಲ ಮನಸ್ಸು ಹಾಗೂ ಮನಃಶಾಂತಿ ಹೊಂದಲು ಸಾಧ್ಯ. ಯೋಗಾಭ್ಯಾಸದಿಂದ ದೀರ್ಘಾವಧಿವರೆಗೆ ಯಾವುದೇ ಕ್ಲಿಷ್ಟಕರ ಆರೋಗ್ಯ ಸಮಸ್ಯೆಗಳಿಗೆ ಒಳಗಾಗದಂತೆ ಜೀವನ ನಡೆಸಬಹುದಾಗಿದೆ. ಯೋಗ ಹಾಗೂ ಪ್ರಾಣಾಯಾಮದಿಂದ ನಮ್ಮ ಸಂಪೂರ್ಣ ಆರೋಗ್ಯ ಕಾಪಾಡಲು ಸಾಧ್ಯ, ಇಂದಿನ ಜೀವನ ಶೈಲಿ, ಮಧುಮೇಹ, ಒತ್ತಡ ತಡೆಗೆ ಯೋಗ ಸಹಾಯಕಾರಿ ಎಂದರು. ಕಾಯಿಲೆಗಳಿಗೆ ಮೂಲಕಾರಣ ಒತ್ತಡ ಇದನ್ನು ಕಡಿಮೆ ಮಾಡಲು ಯೋಗ ಸಹಕಾರಿ, ಮಕ್ಕಳಿಗೆ ಚಿಕ್ಕ ವಯಸ್ಸಿನಲ್ಲೇ ಯೋಗದ ಉಪಯುಕ್ತತೆ ತಿಳಿಸಿ ಮಕ್ಕಳಲ್ಲಿ ಏಕಾಗ್ರತೆ, ಒತ್ತಡ ಮುಕ್ತಕ್ಕೆ ಯೋಗ ಸಹಾಯವಾಗುತ್ತದೆ ಎಂದರು. ಮನುಷ್ಯನಿಗೆ ದೈಹಿಕ–ಮಾನಸಿಕ ಆರೋಗ್ಯ ಹಾಗೂ ಯೋಗಕ್ಷೇಮಕ್ಕೆ ಯೋಗವು ಅವಶ್ಯವಾಗಿದೆ. ಹಾಗಾಗಿ ಪಾಲಕರು ತಮ್ಮ ಮಕ್ಕಳಿಗೆ ಬಾಲ್ಯದಿಂದಲೇ ಯೋಗವನ್ನು ಕಲಿಸಬೇಕು, ಇದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದು ತಿಳಿಸಿದರು.

ಸಿರಿಗೆರೆ ತರಳಬಾಳು ಶ್ರೀಮಠದ ಡಾ. ಶ್ರೀ ಶಿವಮೂರ್ತಿ ಶಿವಾಚಾರ್ಯ ಸ್ವಾಮೀಜಿ ಮಾತಾನಾಡಿ, ಬಂಧನಕ್ಕೂ ಮುಕ್ತಿಗೂ ಮನಸ್ಸೇ ಮೂಲಕಾರಣ ಮನಸ್ಸು ಹತೋಟಿಯಲ್ಲಿರ ಬೇಕಾದರೆ ಯೋಗ ಬಹು ಮುಖ್ಯ, ಮನುಷ್ಯನ ಮನಸ್ಸು ನೀರಿದ್ದಂತೆ, ಸರೋವರಕ್ಕೆ ಕಲ್ಲು ಎಸೆದರೆ ತರಂಗಗಳು ಉಂಟಾಗುತ್ತದೆ. ಹಾಗೇ ಮಾನವನ ಮನಸ್ಸಿಗೆ ದೈನಂದಿನ ಜೀವನದಲ್ಲಿ ಕಷ್ಟಗಳು ಇರುತ್ತದೆ. ಆದರೆ ಅದನ್ನೆಲ್ಲಾ ನಿಭಾಯಿಸಬೇಕು ಅದಕ್ಕೆ ಸದೃಢ ಮನಸ್ಸು ಬೇಕು ಎಂದರು. ಮನಸ್ಸು ಹತೋಟಿಯಲ್ಲಿದ್ದರೆ ಸಂತೋಷದಿಂದ ಇರಲು ಸಾಧ್ಯ, ಮನಸ್ಸು ನಮ್ಮನ್ನು ಆಟವಾಡಿಸಲು ಬಿಡಬಾರದು. ಮನಸ್ಸನ್ನು ನಿಯಂತ್ರಣದಲ್ಲಿ ಹಾಗೂ ಹತೋಟಿಯಲ್ಲಿಡುವುದು ಯೋಗದ ಉದ್ದೇಶ ಎಂದರು. ನಿತ್ಯ ಪ್ರಾರ್ಥನೆ, ಧ್ಯಾನ ಮಾಡುವುದು ಒಳ್ಳೆಯದು. ಮಾನವ ದಾರಿ ತಪ್ಪಲು ಕಾರಣ ಮನಸ್ಸು ಹತೋಟಿಯಲ್ಲಿ ಇಲ್ಲದಿರುವುದು. ಯೋಗ ದಿನಾಚರಣೆ ಹಾಗೂ ಯೋಗ ಅಭ್ಯಾಸ ಒಂದು ದಿನದ ಆಚರಣೆ ಮಾತ್ರವಲ್ಲ, ದಿನನಿತ್ಯದ ಅಭ್ಯಾಸವಾಗಿರಬೇಕು ಎಂದು ತಿಳಿಸಿದರು. ಮನಸ್ಸಿಗೆ ದುಃಖವಾದಾಗ ವೈರಾಗ್ಯ ಎನ್ನುತ್ತಾರೆ. ವೈರಾಗ್ಯ ಎಂದರೆ ಕಾಡಿಗೆ ಹೋಗುವುದಲ್ಲ, ಮನಸ್ಸನ್ನು ಕಸಿಗೊಳಿಸುವುದು. ಶರೀರ ಪಳಗಿಸುವುದು ಮನಸ್ಸು ಪಳಗಿಸುವುದು ಇದು ಯೋಗದಿಂದ ಸಾಧ್ಯ ಹಾಗೂ ಯೋಗದ ಮುಖ್ಯ ಗುರಿ. ಯೋಗಾಸನದಲ್ಲಿ ದೃಢತೆ ಇರಬೇಕು ಹಾಗೂ ಆನಂದ ಇರಬೇಕು. ಯೋಗದಿಂದ ಸ್ಥಿರತೆ ಬರಬೇಕು. ಆಗ ಅದರ ಫಲ ಸಾಧ್ಯ, ನಿತ್ಯ ಜೀವನದಲ್ಲಿ ಜೀವನ ಕ್ರಮ ಆಗಬೇಕು.ಇತ್ತೀಚಿನ ದಿನಗಳಲ್ಲಿ ಒತ್ತಡದ ಬದುಕಿನಿಂದ ಯುವ ಸಮೂಹ ಮಾನಸಿಕ ತೊಳಲಾಟಕ್ಕೆ ಒಳಗಾಗುತ್ತಾರೆ ಇಂದು ಮೊಬೈಲ್

ನಿಂದಾಗಿಅನೇಕಒತ್ತಡಗಳುಂಟಾಗುತ್ತಿವೆ. ಅನೇಕ ಯುವ ದಂಪತಿಗಳ ಸಮಸ್ಯೆ ಮೊಬೈಲ್ ಆಗಿದೆ. ಕೌಟುಂಬಿಕ ಜೀವನದಲ್ಲಿ ದೊಡ್ಡ ಕೋಲಾಹಲ ಮಾಡಿದೆ. ಆದರೆ ದೋಷ ಇರುವುದು ನಿಮ್ಮ ಮನಸ್ಸಿನಲ್ಲೇ ಹೊರತು ಮೊಬೈ[illegible]ನಲ್ಲಿ ಅಲ್ಲ. ಎಲ್ಲಕ್ಕೂ ಮೂಲ ಕಾರಣ ಮನಸ್ಸು, ಅದನ್ನು ನಿಯಂತ್ರಣ ಮಾಡಲು ಯೋಗ ಸಹಕಾರಿ ಎಂದರು. ವಿಶ್ವದಲ್ಲೆಡೆ ಇಂದು ಯೋಗ ದಿನ ನಡೆಯುತ್ತಿದೆ. ಯೋಗ ದಿನನಿತ್ಯದ ಜೀವನ ಕ್ರಮವಾಗಲಿ ಮನಸ್ಸು ಜೋಪಾನ ಮಾಡಲು ಯೋಗ ಸಹಕಾರಿ ಎಂಬುದನ್ನು ತಿಳಿಯಬೇಕು ಎಂದರು. ಸಾವಿರಾರು ವರ್ಷದಿಂದ ಯೋಗ ನಮ್ಮ ದೇಶದಲ್ಲಿ ಪ್ರಚಲಿತವಾಗಿದೆ. ಅಧಿಕೃತವಾಗಿ ವಿಶ್ವ ಸಂಸ್ಥೆ ಯಿಂದ ಅಂಗೀಕಾರವಾಗಿದ್ದು ಸುಮಾರು 195 ರಾಷ್ಟ್ರಗಳು ಯೋಗ ದಿನಾಚರಣೆಯನ್ನು ಆಚರಣೆ ಮಾಡುತ್ತಿವೆ. ಪತಂಜಲಿ ಶ್ರೀ ಗಳ ಯೋಗ ಸೂತ್ರದ ಸಂಖ್ಯೆ 195 ಯೋಗದಿನ ಆಚರಣೆ ಮಾಡುತ್ತಿರುವುದು 195 ರಾಷ್ಟ್ರಗಳು ಒಂದೊಂದು ಸೂತ್ರ ಒಂದೊಂದು ದೇಶದ ಪ್ರತೀಕವಾಗಿದೆ ಎಂದರು.

ಜಿಲ್ಲಾಧಿಕಾರಿ ಡಾ.ವೆಂಕಟೇಶ್. ಎಂ.ವಿ ಮಾತನಾಡಿ ನಮ್ಮ ಹಿರಿಯರು, ಗುರುಗಳು, ಋಷಿಮುನಿಗಳು ಸಾಧಕರು ಹೊಸ ಪೀಳಿಗೆಗೆ ನೀಡಿದ ಅಮ್ಮೂಲ್ಯ ಕೊಡುಗೆ ಯೋಗ, ಯೋಗದಿಂದ ಹತ್ತು ಹಲವು ಉಪಯೋಗಗಳಿವೆ. ಮಾನಸಿಕವಾಗಿ, ಭೌತಿಕ ವಾಗಿ ಸಾಮಾಜಿಕ ಸ್ವಾಸ್ಥ್ಯ ಕಾಪಾಡುವಲ್ಲಿ ಯೋಗ ಸಹಕಾರಿಯಾಗಿದೆ.

## ಫಾಸ್ಟ್ ನ್ಯೂಸ್

### ವಿದ್ಯುತ್ ಮೋಟಾರ್ ರಿವೈಂಡಿಂಗ್ ತರಬೇತಿ

» ದಾವಣಗೆರೆ

ವಿದ್ಯುತ್ ಮೋಟಾರ್ ರಿವೈಂಡಿಂಗ್ ಮತ್ತು ದುರಸ್ತಿ ಸೇವೆಗಳ ತರಬೇತಿಯನ್ನು ಜು.1 ರಿಂದ 30 ದಿನಗಳ ಕಾಲ ಹಮ್ಮಿಕೊಳ್ಳಲಾಗಿದ್ದು ಆಸಕ್ತ ಗ್ರಾಮೀಣ ನಿರುದ್ಯೋಗಿ ಯುವಕರು ಭಾಗವಹಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂ.ಸಂ 8105526792, 9113880324, 9241482541 ನ್ನು ಸಂಪರ್ಕಿಸಬಹುದು.

### ಉದ್ಯೋಗ ಮೇಳ

» ದಾವಣಗೆರೆ

ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ವತಿಯಿಂದ ಜೂನ್ 25 ರಂದು ಬೆಳಗ್ಗೆ 10 ಗಂಟೆಗೆ ಉದ್ಯೋಗ ಮೇಳವನ್ನು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಕೊಠಡಿ ಸಂಖ್ಯೆ-51, ಡಿಸಿ ಆಫೀಸ್, ದಾವಣಗೆರೆ ಇಲ್ಲಿ ಆಯೋಜಿಸಲಾಗಿದೆ. ಈ ಉದ್ಯೋಗ ಮೇಳದಲ್ಲಿ ಖಾಸಗಿ ಸಂಸ್ಥೆಗಳು ಭಾಗವಹಿಸುತ್ತಿದ್ದು, ತಮ್ಮ ಸಂಸ್ಥೆಯಲ್ಲಿ ಖಾಲಿ ಇರುವ ಹುದ್ದೆಗಳಿಗೆ ಎಸ್.ಎಸ್.ಎಲ್.ಸಿ, ಪಿಯುಸಿ, ಐಟಿಐ, ಡಿ. ಫಾರ್ಮ, ಬಿ ಫಾರ್ಮ, ಡಿಪ್ಲೋಮಾ, ಹಾಗೂ ಪದವಿಯಲ್ಲಿ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳನ್ನು ನೇಮಕಾತಿ ಮಾಡಿಕೊಳ್ಳಲಿದ್ದಾರೆ. ಅರ್ಜಿದಾರರು 5 ಸೆಟ್ ಬಯೋಡಾಟಾ ಮತ್ತು ಆಧಾರ್ ಕಾರ್ಡ್ ನೊಂದಿಗೆ ಉದ್ಯೋಗ ಮೇಳದಲ್ಲಿ ಭಾಗವಹಿಸಬಹುದು. ಹೆಚ್ಚಿನ ಮಾಹಿತಿಗೆ ಮೊ.ಸಂ 8105122556, 7483808321, 08192-259446 ಸಂಪರ್ಕಿಸಬಹುದೆಂದು ಉದ್ಯೋಗಾಧಿಕಾರಿ ರವೀಂದ್ರ.ಡಿ ತಿಳಿಸಿದ್ದಾರೆ.

### ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ

» ದಾವಣಗೆರೆ

ನಗರದ ದೇವಾಂಗ ಸಂಘದ ವತಿಯಿಂದ 7ನೇ ವರ್ಷದ ದೇವಾಂಗ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನಿಸಲಾಗಿದೆ ಎಸ್.ಎಸ್.ಎಲ್.ಸಿ. ಸ್ಟೇಟ್ ಸಿಲಬ□□ನಲ್ಲಿ ಶೇ. 85, ಸಿಬಿಎ□□ಇ ಎಸ್ಸೆಸ್ಸೆಲ್ಸಿಯ ಪಠ್ಯಕ್ರಮದಲ್ಲಿ ಶೇ.75 ಹಾಗೂ ಪಿಯುಸಿಯಲ್ಲಿ ಶೇ.85ರಷ್ಟು ಅಂಕ ಪಡೆದಿರುವ ದೇವಾಂಗ ವಿದ್ಯಾರ್ಥಿಗಳು ಅಂಕಪಟ್ಟಿ, ಪ್ರಮಾಣ ಪತ್ರ ಮತ್ತು ಇತ್ತೀಚಿನ ಫೋಟೋದೊಂದಿಗೆ ಜೂ.30 ರೊಳಗಾಗಿ ಶ್ರೀ ದೇವಾಂಗ ವಿದ್ಯಾರ್ಥಿ ನಿಲಯ, ಡಾ. ಪುರಂದರ ಆಸ್ಪತ್ರೆ ರಸ್ತೆ, ಎಂ.ಸಿ.ಸಿ. 'ಎ' ಬ್ಲಾಕ್, ದಾವಣಗೆರೆ ಇಲ್ಲಿಗೆ ಅರ್ಜಿ ಸಲ್ಲಿಸತಕ್ಕದ್ದು. ಹೆಚ್ಚಿನ ಮಾಹಿತಿಗಾಗಿ 94494 22359, 98806 62036, 89715 90727, 91648 29666 ದೇವಾಂಗ ಸಂಘದ ಅಧ್ಯಕ್ಷರಾದ ಬಿ.ಎನ್. ಬಾಬು, ಸಂಪರ್ಕಿಸಬಹುದೆಂದು ತಿಳಿಸಿದ್ದಾರೆ.

### ಸೈನ್ಸ್ ಒಲಂಪಿಯಾಡ್‌ನಲ್ಲಿ ಎಸ್‌ಆರ್‌ಎಸ್ ವಿದ್ಯಾರ್ಥಿ ಧವನ್ ಎಸ್.ರೆಡ್ಡಿಗೆ ಚಿನ್ನ

» ಚಳ್ಳಕೆರೆ

ನಗರದ ಎಸ್‌ಆರ್‌ಎಸ್ ವಿದ್ಯಾಸಂಸ್ಥೆ ಪ್ರತಿವರ್ಷವೂ ಹಲವಾರು ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಪ್ರಶಸ್ತಿಗಳನ್ನು ಪಡೆಯುವ ಮೂಲಕ ಎಲ್ಲರ ಮೆಚ್ಚುಗೆ ಪಾತ್ರವಾಗಿದ್ದು, ಇತ್ತೀಚೆಗೆ ಆನ್‌ಲೈನ್‌ನಲ್ಲಿ ನಡೆದ 2023-24ನೇ ಸಾಲಿನ ಅಂತರಾಷ್ಟ್ರೀಯ ಸೈನ್ಸ್ ಒಲಂಪಿಯಾಡ್‌ನಲ್ಲಿ 10ನೇ ತರಗತಿ ವಿದ್ಯಾರ್ಥಿ ಧವನ್ ಎಸ್.ರೆಡ್ಡಿ ಗಣಿತ ಮತ್ತು ವಿಜ್ಞಾನ ವಿಷಯದಲ್ಲಿ 5ನೇ ರ್‍ಯಾಂಕ್ ಪಡೆದು ಚಿನ್ನದ ಪದಕ, ಪ್ರಶಸ್ತಿ ಹಾಗೂ ನಗದು ಬಹುಮಾನ ಪಡೆದಿದ್ದಾರೆ. ಒಲಂಪಿಯಾಡ್‌ನಲ್ಲಿ ಭಾಗವಹಿಸಿದ್ದ ಇದೇ ಶಾಲೆಯ ಬಿ.ಟಿ.ಶ್ರವಣ್ ಸಹ ಉತ್ತಮ ಸಾಧನೆ ಹಿನ್ನೆಲೆಯಲ್ಲಿ ಐದು ಸಾವಿರ ವಿದ್ಯಾರ್ಥಿವೇತನ, ಪ್ರಶಸ್ತಿ ಪಡೆದಿದ್ದಾರೆಂದು ಆಡಳಿತಾಧಿಕಾರಿ ಪಿ.ಎನ್. ಕೃಷ್ಣಪ್ರಸಾದ್ ತಿಳಿಸಿದ್ದಾರೆ. ಅವರು ಈ ಬಗ್ಗೆ ಮಾಹಿತಿ ನೀಡಿ, ಅಂತರಾಷ್ಟ್ರೀಯ ಮಟ್ಟದ ಸೈನ್ಸ್ ಒಲಂಪಿಯಾಡ್ ಪರೀಕ್ಷೆಯಲ್ಲಿ ಚಿನ್ನದ ಪದಕ ಪಡೆದ ಧವನ್ ಎಸ್.ರೆಡ್ಡಿ ಹಾಗೂ ಬಿ.ಟಿ.ಶ್ರವಣ್‌ರವರ ಸಾಧನೆಗೆ ಪ್ರಶಂಸೆ ವ್ಯಕ್ತವಾಗಿದೆ. ವಿದ್ಯಾರ್ಥಿಗಳ ಸಾಧನೆಗೆ ಸಂಸ್ಥೆಯ ಅಧ್ಯಕ್ಷ ಬಿ.ಎ.ಲಿಂಗಾರೆಡ್ಡಿ, ಕಾರ್ಯದರ್ಶಿ ಸುಜಾತಲಿಂಗಾರೆಡ್ಡಿ, ಪ್ರಾಂಶುಪಾಲ ಬಿ.ಎಸ್.ವಿಜಯ್ ವಿದ್ಯಾರ್ಥಿಗಳನ್ನು ಅಭಿನಂದಿಸಿ, ಮಾರ್ಗದರ್ಶನ ನೀಡಿದ ಶಿಕ್ಷಕರ ತಂಡಕ್ಕೆ ಕೃಜ್ಞತೆ ಸಲ್ಲಿಸಿದ್ಧಾರೆ.

### ನಗರಂಗೆರೆಯಲ್ಲಿ ನಾಯಿಕಚ್ಚಿಸಿಕೊಂಡ ವ್ಯಕ್ತಿ ಬೆಂಗಳೂರಿನಲ್ಲಿ ಸಾವು

» ಚಳ್ಳಕೆರೆ

ತಾಲ್ಲೂಕಿನ ನಗರಂಗೆರೆ ಗ್ರಾಮದ ಖಾಸಗಿ ಶಾಲೆಯ ರಸ್ತೆಯಲ್ಲಿ ಬೀದಿನಾಯಿ ಕಚ್ಚಿ ವ್ಯಕ್ತಿಯೊಬ್ಬ ಮೃತಪಟ್ಟ ಘಟನೆ ನಡೆದಿದೆ. ವೃತ್ತಿಯಲ್ಲಿ ಬಸ್ ಡ್ರೈವರಾಗಿದ್ದ ಚನ್ನಬಸಣ್ಣ(60) ಮೃತಪಟ್ಟವನಾಗಿದ್ದು, ಜೂನ್ 9ರಂದು ಈತನಿಗೆ ಬೀದಿನಾಯಿಯೊಂದು ಕಚ್ಚಿತ್ತು ಎನ್ನಲಾಗಿದೆ. ಕೂಡಲೇ ಆತನನ್ನು ಸಾರ್ವಜನಿಕ ಆಸ್ಪತ್ರೆಗೆ ದಾಖಲಿಸಿ ಹೆಚ್ಚಿನ ಚಿಕಿತ್ಸೆಗಾಗಿ ಜಿಲ್ಲಾ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗಿದ್ದು, ಗುಣಮುಖನಾಗದ ಹಿನ್ನೆಲೆಯಲ್ಲಿ ಬೆಂಗಳೂರಿನ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಅಲ್ಲಿ ಆತನ ಮೃತಪಟ್ಟಿರುತ್ತಾನೆ. ಸದರಿ ನಾಯಿ ಕಳೆದ ಕೆಲವು ದಿನಗಳಿಂದ ಅನೇಕರನ್ನು ಇದೇ ರೀತಿ ಕಚ್ಚಿದ್ದು ಆ ಪೈಕಿ ಒಬ್ಬ ಮೃತನಾಗಿದ್ಧಾನೆ.

# ಸರ್ಕಾರಿ ಪದವಿಪೂರ್ವ ಕಾಲೇಜು ಸೇರಿದಂತೆ ವಿವಿಧ ವಿದ್ಯಾಸಂಸ್ಥೆಯಲ್ಲಿ ವಿಶ್ವಯೋಗ ದಿನಾಚರಣೆ ಆಚರಣೆ

» ಚಳ್ಳಕೆರೆ

ನಗರದ ಸರ್ಕಾರಿ ಪದವಿಪೂರ್ವ ಕಾಲೇಜು ಆವರಣದಲ್ಲಿ ವಿಶ್ವಯೋಗ ದಿನಾಚರಣೆ ಅಂಗವಾಗಿ ರಾಷ್ಟ್ರೀಯ ಸೇವಾಯೋಜನಾ ಘಟಕದ ವತಿಯಿಂದ ಯೋಗಾಸನಕಾರ್ಯಕ್ರಮವವನ್ನು ನಡೆಸಲಾಯಿತು.

ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಪ್ರಾಂಶುಪಾಲ ಎಂ.ರವೀಶ್, ಇಂದು ದೇಶದೆಲ್ಲೆಡೆ ವಿಶ್ವಯೋಗ ದಿನಾಚರಣೆಯನ್ನು ಕೋಟ್ಯಾಂತರ ಜನರು ಮಾಡುವ ಮೂಲಕ ಯೋಗಾಸನದ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುತ್ತಿದ್ಧಾರೆ. ಕಳೆದ ಸಾವಿರಾರು ವರ್ಷಗಳಿಂದ ಯೋಗಾಸನ ಪದ್ದತಿ ನಮ್ಮಲ್ಲಿ ಜಾರಿ ಇದೆ. ಕೇಂದ್ರ ಸರ್ಕಾರವೂ ಸಹ ಯೋಗಾಸನದ ಬಗ್ಗೆ ಹಲವಾರು ಕಾರ್ಯಕ್ರಮಗಳ ಮೂಲಕ ಜನರಲ್ಲಿ ಜಾಗೃತಿ ಮೂಡಿಸುತ್ತಿದೆ ಎಂದರು.

ರಾಷ್ಟ್ರೀಯ ಸೇವಾ ಯೋಜನಾಧಿಕಾರಿ ಬಿ.ಶಾಂತಕುಮಾರಿ ಮಾತನಾಡಿ, ಕಾಲೇಜು ವತಿಯಿಂದ ಗ್ರಾಮೀಣ ಪ್ರದೇಶದಲ್ಲಿ ನಡೆಯುವ ರಾಷ್ಟ್ರೀಯ ಯೋಜನಾ





ಶಿಬಿರಗಳಲ್ಲೂ ಸಹ ಯೋಗಾಸನದ ಬಗ್ಗೆ ಮಾಹಿತಿ ನೀಡಲಾಗುತ್ತಿದೆ. ಪ್ರತಿನಿತ್ಯ ಯೋಗ ಮಾಡಿದರೆ ದೇಹದ ಆರೋಗ್ಯ ಸುಧಾರಣೆಯ ಜೊತೆಗೆ ನಿರೋಗಿಗಳಾಗಿ ಬದುಕಬಹುದು ಎಂದರು. ಕಾರ್ಯಕ್ರಮದಲ್ಲಿ ಹಿರಿಯ ಉಪನ್ಯಾಸಕ ವಸಂತಕುಮಾರ್, ನಾಗಭೂಷಣ್, ಪುಷ್ಪಲತಾ, ಹಬೀಬುಲ್ಲಾ, ವಾಹಿದ್, ರವಿಕುಮಾರ್, ಜಗದೀಶ್, ಪುಟ್ಟರಂಗಪ್ಪ, ಲಲಿತಮ್ಮ, ರೇಖಾ, ಹೀನಾಕೌಸರ್, ಮಂಜುನಾಥ, ಈರಣ್ಣ, ತಿಪ್ಪೇಸ್ವಾಮಿ, ರಾಜಶೇಖರ್, ಮಹಂತೇಶ್, ಜಾನಕಮ್ಮ ಮುಂತಾದವರು ಭಾಗವಹಿಸಿದ್ದರು.

ಪತಂಜಲಿ ಯೋಗ ಶಿಕ್ಷಣ ಕೇಂದ್ರ ತನ್ನ 10ನೇ ವಾರ್ಷಿಕೋತ್ಸವ ಹಿನ್ನೆಲೆಯಲ್ಲಿ ನಗರದ ಎಚ್‌ಪಿಪಿಸಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಮುಂಭಾಗದಲ್ಲಿ ವಿಶ್ವಯೋಗ ದಿನಾಚರಣೆ ಆಚರಿಸಿದ್ದು ಸುಮಾರು ಎರಡು ಸಾವಿರಕ್ಕೂ ಹೆಚ್ಚು ಯೋಗಪಟುಗಳು ಭಾಗವಹಿಸಿದ್ದರು.

ನಗರದ ಸಹ್ಯಾದ್ರಿ ವಿದ್ಯಾಸಂಸ್ಥೆಯೂ ಸಹ ಸಂಸ್ಥೆ ಆವರಣದಲ್ಲಿ ವಿಶ್ವಯೋಗ ದಿನಾಚರಣೆಯನ್ನು ಆಚರಿಸಿದರು. ದೈಹಿಕ ಶಿಕ್ಷಕರ ಜಗದೀಶ್, ಮಲ್ಲಿಕಾರ್ಜುನ್, ಸಂತೋಷ್, ಯೋಗೀಶ್, ನಾಸೀರ್, ತಿಪ್ಪೇಸ್ವಾಮಿ, ಪವಿತ್ರ, ಎಚ್.ಮಂಜುನಾಥ ಮುಂತಾದವರು ಭಾಗವಹಿಸಿದ್ದರು.

ನಗರದ ಬಾಪೂಜಿ ಆಯುರ್ವೇದಿಕ್ ಕಾಲೇಜಿನ ನೂರಾರು ವಿದ್ಯಾರ್ಥಿಗಳು ವಿಶ್ವಯೋಗ ದಿನಾಚರಣೆ ಅಂಗನವಾಗಿ ನಗರದ ಪ್ರಮುಖ ರಸ್ತೆಗಳಲ್ಲಿ ಮೆರವಣಿಗೆ ನಡೆಸಿ ಯೋಗದ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿದರು. ಆಯುರ್ವೇದಿಕ್ ಕಾಲೇಜು ವತಿಯಿಂದ ಹೊರಟ ಮೆರವಣಿಗೆ ಜಗಜೀವನರಾಮ್, ವಾಲ್ಮೀಕಿ, ಅಂಬೇಡ್ಕರ್, ನೆಹರೂ ವೃತ್ತದ ಮೂಲಕ ಕಾಲೇಜಿಗೆ ವಾಪಾಸ್ ತೆರಳಿದರು. ಪ್ರಾಂಶುಪಾಲ ಜಿ.ಬಸವರಾಜು ಮುಂತಾದವರು ಇದ್ದರು.


# 2 ವಾರಗಳ ಮಾವಿನ ಮೇಳ ಅದ್ದೂರಿ ಯಶಸ್ಸು ಕಂಡದ್ದು ಹಣ್ಣಿನ ರಾಜನೆ!

» ನಾಗತಿಹಳ್ಳಿಮಂಜುನಾಥ್

ಕೊಳ್ಳಿ ರಾಷ್ಟ್ರಗಳಲ್ಲೊಂದು ಪುಟ್ಟ ದೇಶ, ಅದರ ರಾಜಧಾನಿಯಲ್ಲೊಂದು ಚಿಕ್ಕ ಜಾಗದಲ್ಲಿ ಒಳಾಂಗಣ ಚಿಕ್ಕಜಾಗದಲ್ಲಿ ಒಳಾಂಗಣ ಮಳಿಗೆ. ಮಳಿಗೆಯ ಹೊರಗಿನ ಮಾರುಕಟ್ಟೆ ಪ್ರದೇಶ ಮಳಿಗೆಯ ಒಳಗೆ ಹವಾನಿಯಂತ್ರಿತ ವಾತಾವರಣ, ವಿಶೇಷವಾಗಿ ಹಣ್ಣಿನ ರಾಜನಿಗೆ ಈ ಸಿದ್ಧತೆ.

50 ಕ್ಕೂ ಹೆಚ್ಚು ಅಂಗಡಿಗಳು, ಸುಮಾರು 25 ಮಾರಾಟಗಾರರು, ಎರಡು ವಾರದ ಸಂತೆ ಎಂದೇ ಹೇಳಬಹುದು. ಪ್ರತಿದಿನಕ್ಕೆ ಸಾವಿರಾರು ಜನರು ಬಂದು ಆನಂದಿಸಿ, ಸ್ವಾದಿಸಿ, ಹೋಗುತ್ತಿರುವರು. ಇದೇ ಕತಾರಿನ ದೋಹದಲ್ಲಿರುವ ಸೂಕ್ ವಾಕಿಫ್ ನಲ್ಲಿ ನಡೆದ ಮಾವಿನ ಮೇಳ. ರಾಜಪುರಿ, ತೂತಪುರಿ, ಬಾದಾಮಿ, ನಾಟಿ, ಸಿಂಧೂರ ಇನ್ನೂ ಅನೇಕ ತಳಿಗಳ ಮಾವಿನ ಹಣ್ಣುಗಳ ಸುವಾಸನೆ ತುಂಬಿದ ಈ ಒಳಾಂಗಣ ಪ್ರದೇಶದಲ್ಲಿ, ಮಾವಿನ ಹಣ್ಣಿನ ರಸ, ಮಾವಿನಕಾಯಿ ಜೊತೆಗೆ ಉಪ್ಪು ಖಾರ, ಮಾವಿನ ಉಪ್ಪಿನಕಾಯಿ, ಮಾವಿನ ಐಸ್ ಕ್ರೀಮ್, ಮಾವಿನ ಫಲೂದ, ಮಾವಿನ ಲಸ್ಸಿ ಹೀಗೆ ವೈವಿಧ್ಯಮಯ ರುಚಿಕರ ರಸಭರಿತ ಮಾವಿನ ತಿಂಡಿ ಮತ್ತು ಪಾನಿಯಗಳು ಎಲ್ಲರ ಇಂದ್ರಿಯಗಳನ್ನು ಆಕರ್ಷಿಸಿತು.

ಒಂದೆಡೆ ಸುಪ್ರಸಿದ್ಧ ವಾಣಿಜ್ಯ ಮಳಿಗೆಗಳ ಸಾಲಾಗಿ ಇದ್ದರೆ ಇನ್ನೊಂದೆಡೆ ಪ್ರಸಿದ್ಧ ಉಪಹಾರ ಕೇಂದ್ರಗಳ ಅಂಗಡಿ ಮುಂಗಟ್ಟುಗಳು ಇದ್ದವು, ಮತ್ತೊಂದೆಡೆ ನೇರ ಮಾರಾಟಗಾರರ (ಹೋಲ್ಸೇಲ್) ಮಳಿಗೆಗಳು ಇದ್ದವು. ಭಾರತ




, ಕತಾರ್ , ಶ್ರೀಲಂಕಾ , ಬಾಂಗ್ಲಾದೇಶ, ಫಿಲಿಪಿನ್ಸ್ ಇನ್ನೂ ಹಲವು ದೇಶದ ಜನರು ಬಂದು ಈ ಮಾವಿನ ಮೇಳದಲ್ಲಿ ಹಣ್ಣಿನ ಯಾವುದಾದರೂ ಒಂದು ರುಚಿಯನ್ನು ಸೇವಿಸಿ ಹೋಗಿರುವರು.

ನಿಜವಾಗಲೂ ಅದ್ಭುತ ದೃಶ್ಯವಲ್ಲವೇ? ಕರ್ನಾಟಕ, ಆಂಧ್ರಪ್ರದೇಶ, ಮಹಾರಾಷ್ಟ್ರ, ತೆಲಂಗಾಣ, ಕೇರಳ, ಮಧ್ಯಪ್ರದೇಶ, ಗೋವಾ ಇನ್ನಿತರ ರಾಜ್ಯಗಳಿಂದ ಆಮದು ತರಿಸಿದ ಮಾವಿನ ಹಣ್ಣುಗಳು. ಕತರಿನ ಭಾರತೀಯ ದೂತಾವಾಸದ ನೇತೃತ್ವದಲ್ಲಿ ಐಬಿಪಿಸಿ (ಭಾರತೀಯ ವ್ಯವಹಾರ ಹಾಗೂ ವೃತ್ತಿ ನಿರತ ಮಂಡಳಿಯ) ಸಹಯೋಗದೊಂದಿಗೆ ಏರ್ಪಡಿಸಿದ್ದ ಎರಡು ವಾರಗಳ ಮಾವಿನ ಮೇಳವು, 8 ಜೂನ್ 2024ರಂದು ಸಂಪನ್ನಗೊಂಡಿತು. ನಿಜಕ್ಕೂ ಅದ್ದೂರಿ ಯಶಸ್ಸು ಕಂಡದ್ದು ಹಣ್ಣಿನ ರಾಜನೆ!

ಈ ಮೇಳವನ್ನು ಆಯೋಜಿಸಲು ಹಲವು ಸಂಘ ಸಂಸ್ಥೆಗಳು ಕೈಜೋಡಿಸಿದ್ದವು. ಅದರಲ್ಲಿ ಪ್ರಮುಖವಾದದು ಕತಾರಿನ ಭಾರತೀಯ ಸಂಸ್ಕೃತಿಕ ಕೇಂದ್ರ (ಐಸಿಸಿ). ಪ್ರತ್ಯೇಕವಾಗಿ ಐಸಿಸಿ ಉಪಾಧ್ಯಕ್ಷರಾದ ಕರ್ನಾಟಕ ಮೂಲದವರಾದ ಶ್ರೀ ಸುಬ್ರಹ್ಮಣ್ಯ ಹೆಬ್ಬಾಗಿಲು ಅವರು ಕತಾರಿನ ಹಲವಾರು ಅಧಿಕಾರಿಗಳು, ಭಾರತೀಯ ರಾಜದೂತವಾಸದ ಅಧಿಕಾರಿಗಳು, ಸ್ಥಳೀಯ ಸಂಘ ಸಂಸ್ಥೆಗಳ ಪ್ರತಿನಿಧಿಗಳು, ಮಳಿಗೆಗಳು ಹಾಗೂ ಉಪಹಾರ ಕೇಂದ್ರಗಳ ಮುಖ್ಯಸ್ಥರೊಂದಿಗೆ ಚರ್ಚಿಸಿ, ಸಮಾಲೋಚಿಸಿ, ಈ ಬೃಹತ್ ಗಾತ್ರದ ಮಾವಿನ ಮೇಳವನ್ನು ಆಯೋಜಿಸಲು ಭಾಗಿಯಾಗಿ, ಯಶಸ್ಸಿಗೆ ಕಾರಣಕರ್ತರುಗಳಲ್ಲಿ ಒಬ್ಬರಾಗಿದ್ದಾರೆ.

## ಜೂ.24 ರಂದು ಅಂಗನವಾಡಿ ಕಾರ್ಯಕರ್ತೆಯರಿಂದ ಬೆಂಗಳೂರು ಚಲೋ ಅನಿರ್ಧಿಷ್ಟ ಮುಷ್ಕರ



» ಹೊಸದುರ್ಗ

ರಾಜ್ಯ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರ ಫೆಡರೇನ್ ವತಿಯಿಂದ ಬೆಂಗಳೂರಿನಲ್ಲಿ ಜೂನ್ 24 ರಂದು ಸೋಮವಾರ ಬೆಂಗಳೂರು ಚಲೋ ಚಳುವಳಿಯಲ್ಲಿ ಭಾಗವಹಿಸಿ ಅನಿರ್ಧಿಷ್ಟ ಮುಷ್ಕರ ನಡೆಸಲಾಗವುದು ಎಂದು ಫೆಡರೇನ್ ಅಧ್ಯಕ್ಷೆ ಜಿ.ಸುಮಿತ್ರಾಬಾಯಿ ತಿಳಿಸಿದ್ದಾರೆ. ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು ಕಲ್ಯಾಣ ಕರ್ನಾಟಕ ಭಾಗದಲ್ಲಿ 1008 ಎಲ್.ಕೆ.ಜಿ.ಮತ್ತು ಯುಕೆಜಿ ಸರ್ಕಾರಿ ಶಾಲೆಗಳಲ್ಲಿ ಪ್ರಾರಂಭಿಸುವ ಬದಲು ಹಾಲಿ ಇರುವ ಅಂಗನವಾಡಿ ಕೇಂದ್ರಗಳಲ್ಲಿಯೇ ಪ್ರಾರಂಭಿಸಬೇಕು ಎಂದು ರಾಜ್ಯ ಸರ್ಕಾರವನ್ನು ಒತ್ತಾಯಿಸಲಾಗುವುದು ತಾಲೂಕಿನ ಕೆಲವು ಗ್ರಾಮಗಳ ಸರ್ಕಾರಿ ಶಾಲೆಗಳಲ್ಲಿ ಎಲ್.ಕೆ.ಜಿ.ಮತ್ತು ಯುಕೆಜಿ ಪ್ರಾರಂಭಿಸಲಾಗಿದ್ದು ತಾಲೂಕಿನ ಎಲ್ಲಾ ಅಂಗನವಾಡಿಯ ಕಾರ್ಯಕರ್ತೆಯರು ಮತ್ತು ಸಹಾಯಕಿಯರು ಚಳುವಳಿಯಲ್ಲಿ ಭಾಗವಹಿಸಲು ಹೋಗುತ್ತಿದ್ದೇವೆ,ಆದರೆ ಸದರಿ ಚಳುವಳಿಯು ಅನಿರ್ಧಿಷ್ಟ ಮುಷ್ಕರವು ಎರಡನೇ ದಿನಕ್ಕೆ ಮುಂದೂಡಿದರೆ ಕೇಂದ್ರವನ್ನು ತೆರೆಯಲಾಗುವುದಿಲ್ಲ,ಒಂದೇ ದಿನಕ್ಕೆ ಮುಷ್ಕರ ಮುಗಿದರೆ ಮರು ದಿವಸ ಬಂದು ಕೇಂದ್ರದಲ್ಲಿ ಕರ್ತವ್ಯ ಮಾಡುತ್ತೇವೆ ಎಂದು ಸಿಡಿಪಿಓ ಕುಮಾರಿ ಅಭಿಲಾಷ ಅವರಿಗೆ ಶುಕ್ರವಾರ ಮನವಿಯನ್ನ ನೀಡಿದ್ದಾರೆ ಈ ಸಂಧರ್ಬದಲ್ಲಿ ಎಐಟಿಯುಸಿ ಅಧ್ಯಕ್ಷ ಕುಮಾರಸ್ವಾಮಿಕಾರ್ಯಧರ್ಶಿ ಗೀತಾಂಜಲಿ ಎಸ್,ರೂಪ, ಸೌಭಾಗ್ಯ ಸೇರಿದಂತೆ ಮತ್ತಿತರರು ಇದ್ದರು.

## ಪ್ರಮುಖ ಸುದ್ದಿ

### ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸಭೆ

# ಸರ್ಕಾರಿ ಶಾಲೆ ಪರಿಶೀಲಿಸಿ ಅಗತ್ಯ ಮೂಲಸೌಕರ್ಯ ಕಲ್ಪಿಸಿ

» ದಾವಣಗೆರೆ

ಗ್ರಾಮಕ್ಕೆ ಬಸ್ಸಿನ ವ್ಯವಸ್ಥೆ ಕಲ್ಪಿಸುವ ಜೊತೆಗೆ ಗ್ರಾಮದಲ್ಲಿ ಶಿಥಿಲಾವಸ್ಥೆ ತಲುಪಿರುವ ಸರ್ಕಾರಿ ಶಾಲೆಗಳನ್ನು ಅಧಿಕಾರಿಗಳು ಪರಿಶೀಲನೆ ನಡೆಸಿ ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ಡಾ.ವೆಂಕಟೇಶ್.ಎಂ.ವಿ ಸೂಚಿಸಿದರು.

ಶುಕ್ರವಾರ ಜಿಲ್ಲಾಡಳಿತ ಭವನದ ತುಂಗಭದ್ರಾ ಸಭಾಂಗಣದಲ್ಲಿ ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತಾನಾಡಿದ ಅವರು ಈ ಹಿಂದೆ ಸಭೆಯಲ್ಲಿ ಚರ್ಚಿಸಲಾಗಿದ್ದ ಜಗಳೂರು ತಾಲ್ಲೂಕು ಮೂಡಲಮಾಚಿಕೆರೆ ಗ್ರಾಮದಲ್ಲಿ ಮನೆಗಳಿಗೆ ನೀರಿನ ವ್ಯವಸ್ಥೆ ಕಲ್ಪಿಸಲು ಪೈಪ್ ಲೈನ್ ವ್ಯವಸ್ಥೆ ಮಾಡಿದ್ದು, ಗಾಮದಲ್ಲಿನ ಮನೆಗಳಿಗೆ ಆಳವಡಿಸಿರುವ ನಲ್ಲಿಗಳಲ್ಲಿ ನೀರಿನ ಜೊತೆ ಚರಂಡಿ ನೀರು ಸಹಾ ಬರುತ್ತಿರುವ ವಿಚಾರವಾಗಿ ಕೆಲವು ಜಾಗಗಳಲ್ಲಿ ಪೈಪ್ ಲೈನ್ ಒಡೆದು ಹೊಗಿರುವುದನ್ನು ಈಗಾಗಲೇ ಗ್ರಾಮ ಪಂಚಾಯಿತಿಯಿಂದ ದುರಸ್ಥಿಗೊಳಿಸಿ ಕುಡಿಯುವ ನೀರನ್ನು ಸರಬರಾಜು ಮಾಡಲಾಗಿರುತ್ತದೆ ಎಂದು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಕಾರ್ಯಪಾಲಕ ಅಭಿಯಂತರರ ತಿಳಿಸಿದರು.

ನಲ್ಲಿಗಳಲ್ಲಿ ನೀರಿನ ಜೊತೆ ಚರಂಡಿ ನೀರು ಇನ್ನೂ ಕೂಡ ನಿವಾರಣೆಯಗಿರುವುದಿಲ್ಲ ಎಂಬ ವಿಚಾರವನ್ನು ತಿಳಿಸಿದರು.

ಜಿಲ್ಲಾಧಿಕಾರಿ ಮಾತಾನಾಡಿ ಗ್ರಾಮ ಪಂಚಾಯಿತಿ ಅಥವಾ ಸ್ಥಳೀಯ ಅನುದಾನದಲ್ಲಿ ಹೊಸ ಪೈಪ್ ಲೈನ್ ಅಳವಡಿಸುವಂತೆ ಕಾರ್ಯಪಾಲಕ ಇಂಜಿನಿಯರ್ ಗೆ ಸೂಚಿಸಿದರು.



ಜಗಳೂರು ತಾಲ್ಲೂಕಿನ ಕೆರೆಯ ಹಿಂಭಾಗದಲ್ಲಿ ಸುಮಾರು ವರ್ಷಗಳಿಂದ 30 ರಿಂದ 40 ಕೊರಚ ಸಮುದಾಯದ ಕುಟುಂಬಗಳು ವಾಸವಿದ್ದು, ಅತಿಯಾದ ಮಳೆಯ ಕಾರಣ ಗುಡಿಸಲುಗಳು ಹಾಳಾಗಿವೆ, ಪಟ್ಟಣ ಪಂಚಾಯಿತಿಯ ಆದೇಶದ ಮೇರೆಗೆ ಬಸ್ ಸ್ಟ್ಯಾಂಡ್ ಬಳಿ ಇರುವ ಮಳಿಗೆಗಳಲ್ಲಿ ವಾಸಿಸಲು ಅವಕಾಶ ಮಾಡಿಕೊಡಬೇಕು. ಆದರೆ ಇತ್ತೀಚೆಗೆ 53 ಮಳಿಗೆಗಳ ಹರಾಜು ಆದಕಾರಣ ಗುಡಿಸಲುಗಳನ್ನು ಕಳೆದುಕೊಂಡು ಮಳಿಗೆಗಳಲ್ಲಿ ವಾಸವಿದ್ದ ಕುಂಟುಂಬಗಳಿಗೆ ಯಾವುದೇ ರೀತಿಯ ವ್ಯವಸ್ಥೆ ಮಾಡದೇ ಖಾಲಿ ಮಾಡಲು ಸೂಚಿಸಿರುವ ವಿಚಾರ ಪ್ರಸ್ತಾಪಿಸಿದಾಗ ಜಿಲ್ಲಾಧಿಕಾರಿಗಳು ಕುಟುಂಬಗಳಿಗೆ ಬೇರೆ ಕಡೆ ವಾಸಿಸಲು ಅವಕಾಶ ಕಲ್ಪಿಸಲು ಜಿಲ್ಲಾ ನಗರಾಭಿವೃದ್ಧಿ ಕೋಶ ಯೋಜನಾ ನಿರ್ದೇಶಕರಿಗೆ ಸೂಚಿಸಿದರು. ಹರಿಹರ ನಗರದಲ್ಲಿರುವ ಡಿ.ಆರ್.ಎಂ ಶಾಲೆಯ ಕಾಂಪೌಂಡ್ ಶಿಥಿಲ ಸ್ಥಿತಿಯಲ್ಲಿದ್ದು ದುರಸ್ಥಿ ಮಾಡುವ ವಿಚಾರವಾಗಿ ಹರಿಹರ ನಗರಸಭೆ ಇವರು ನಗರದಲ್ಲಿರುವ ಡಿ.ಆರ್.ಎಂ. ಶಾಲೆಗೆ ಭೇಟಿ ನೀಡಿ ಪರಿಶೀಲಿಸಲಾಗಿ ಈ ಶಾಲೆಗೆ ಹೊಸದಾಗಿ ಕಾಂಪೌಂಡ್ ನಿರ್ಮಾಣಕ್ಕೆ ಅಂದಾಜು 15 ಲಕ್ಷಗಳು ಆವಶ್ಯಕತೆ ಇದ್ದು, ಹರಿಹರ ನಗರಸಭೆಯಿಂದ ನಿರ್ಮಾಣ ಮಾಡಲು ಅನುದಾನದ ಕೊರತೆ ಇರುವುದರಿಂದ ಸರ್ಕಾರಕ್ಕೆ ಅನುದಾನ ಬಿಡುಗಡೆಗಾಗಿ ಪ್ರಸ್ತಾವನೆ ಸಲ್ಲಿಸಲಾಗುವುದು ಎಂದರು.

ದಾವಣಗೆರೆ ಜಿಲ್ಲೆಯ ಜಗಳೂರು ಬಸ್ ಸ್ಟಾಂಡ್, ಎ.ಪಿ.ಎಂ.ಸಿ ಹಾಗೂ ಗೋಶಾಲೆ ಬಳಿ ಎಸ್.ಸಿ, ಎಸ್.ಟಿ ಸಮುದಾಯದವರು ಗುಡಿಸಲುಗಳಲ್ಲಿ ವಾಸವಿದ್ದು ಅವರಿಗೆ ಶೌಚಾಲಯ ನಿರ್ಮಿಸಿಕೊಡವ ವಿಷಯವನ್ನು ತಿಳಿಸಿದಾಗ ಜಿಲ್ಲಾಧಿಕಾರಿಗಳು ಶೌಚಾಲಯ ಅಥವಾ ಸುಲಭ ಶೌಚಾಲಯಗಳನ್ನು ನಿರ್ಮಿಸಿ ಕೊಡಲು ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ ಇವರಿಗೆ ಸೂಚಿಸಿದರು. ಹರಿಹರ ನಗರಸಭೆಯಿಂದ ವಿವಿಧ ಕಾಮಗಾರಿಗಳಿಗೆ ಇ-ಪ್ರಕ್ಯೂರಮೆಂಟ್ ಕರೆಯಲಾಗಿದ್ದು ಉದ್ದೇಶ ಪೂರ್ವಕವಾಗಿ ಟೆಂಡರ್ ನಲ್ಲಿ ಪರಿಶಿಷ್ಟ ಜಾತಿ,ಪ. ಪಂಗಡದವರಿಗೆ ಮೀಸಲಿಟ್ಟಿದ್ದ ಟೆಂಡರ್ ಗಳನ್ನು ರದ್ದು ಮಾಡಿರುತ್ತಾರೆಂದು ಪ್ರಸ್ತಾಪಿಸಿದಾಗ

ಜಿಲ್ಲಾ ನಗರಾಭಿವೃದ್ಧಿ ಕೋಶ ಯೋಜನಾ ನಿರ್ದೇಶಕರು ತಾಂತ್ರಿಕ ತೊಂದರೆಗಳನ್ನು ಹೊರತುಪಡಿಸಿ ಯಾವುದೇ ದುರುದ್ದೇಶದಿಂದ ಪ.ಜಾ, ಪ.ಪಂಗಳಿಗೆ ಮೀಸಲಿಟ್ಟ ಟೆಂಡರ್ ಗಳನ್ನು ರದ್ದು ಪಡಿಸಲಾಗಿರುವುದಿಲ್ಲ ಎಂದು ಪೌರಾಯುಕ್ತರು ವರದಿ ನೀಡಿರುತ್ತಾರೆ ಎಂದರು. ಹಾಸ್ಟೆಲ್ ಸ್ವಂತ ಕಟ್ಟಡ ನಿರ್ಮಾಣಕ್ಕಾಗಿ ಎಲ್ಲಾ ಇಲಾಖೆಗಳಿಂದ ಹೆಚ್ಚು ಹಾಸ್ಟೆ□□ಗಳಿಗೆ ನಿವೇಶನ ಮಂಜೂರು ಮಾಡಬೇಕೆಂದರು. ಸಮಾಜದ ಬದಲಾವಣೆಗೆ ಶಿಕ್ಷಣ ಪ್ರಮುಖವಾಗಿದ್ದು ಈ ನಿಟ್ಟಿನಲ್ಲಿ ಪರಿಶಿಷ್ಟ ಜಾತಿ, ಪ.ಪಂಗಡದ ವಿದ್ಯಾರ್ಥಿಗಳು ಹಾಸ್ಟೆಲ್ ಪ್ರವೇಶಕ್ಕೆ ಬಂದಾಗ ನಿರಾಕರಣೆ ಮಾಡದೆ ಪ್ರವೇಶ ಕಲ್ಪಿಸಲಾಗಿದೆ. ಪ್ರತಿ ಗ್ರಾಮದಲ್ಲಿಯು ಸ್ಮಶಾನ ಇದ್ದು ಇದನ್ನು ಅಭಿವೃದ್ಧಿ ಮಾಡುವ ಮೂಲಕ ಲ್ಯಾಂಡ್ ಬೀಟ್ ಮಾಡಲಾಗುತ್ತದೆ. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್.ಬಿ.ಇಟ್ನಾಳ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಮಲ್ಲನಾಯ್ಕ, ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕ ಕೆ.ನಾಗರಾಜ, ಡಿಡಿಪಿಐ ಕೊಟ್ರೇಶ್, ಪರಿಶಿಷ್ಟ ವರ್ಗಗಳ ಅಧಿಕಾರಿ ಬೇಬಿ ಸುನೀತಾ ಹಾಗೂ ಕಿರುವಾಡಿ ಮಂಜುನಾಥ, ಬಾಬಣ್ಣ ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T